ಸಂಪುಟ : 10 ಸಂಚಿಕೆ: 82 ಪುಟ : 4+2 ಬೆಲೆ: 3.00 ಬುಧವಾರ ಎಪ್ರಿಲ್ 30 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 82 Pages : 4+2 Price : 3.00 Wednesday April 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಸರ್ಕಾರಿ ನೌಕರರ ದಿನಾಚರಣೆ । ಜಿಲ್ಲಾ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ' ಪ್ರದಾನ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ ನುಡಿ

# ಗದಗ ಜಿಲ್ಲೆಯನ್ನು ಸರ್ವಶ್ರೇಷ್ಠ ಜಿಲ್ಲೆಯಾಗಿಸೋಣ



> ನಾವೆಲ್ಲ ಸಾರ್ವಜನಿಕ ಸೇವಕರು ಎಂಬುದನ್ನು ಮೊದಲು ಅರ್ಥ ಮಾಡಿಕೊಳ್ಳಬೇಕು. ನಂತರ ಕಾನೂನು ಅಡಿಯಲ್ಲಿ ಸಾರ್ವಜನಿಕರಿಗೆ ಸೇವೆ ಒದಗಿಸಬೇಕು. ಪ್ರಜೇಗಳೇ ಪ್ರಭುಗಳು ಎಂಬುದನ್ನು ಎಂದಿಗೂ ಮರೆಯಬಾರದು. ಅಧಿಕಾರಿಗಳು ದರ್ಪ-ದೌಲತ್ತು ಬದಿಗಿಟ್ಟು ಸಾರ್ವಜನಿಕರ ಸೇವೆ ಮಾಡುವ ಮನಸ್ಥಿತಿ ಹೊಂದಬೇಕು. ಸಾರ್ವಜನಿಕರ ತೆರಿಗೆ ಹಣದಿಂದ ನಾವೆಲ್ಲರೂ ಜೀವನ ನಡೆಸುತ್ತಿದ್ದೇವೆ ಎಂಬುದನ್ನು ಮನನ ಮಾಡಿಕೊಳ್ಳಬೇಕು.
>
> **– ಎಚ್.ಕೆ. ಪಾಟೀಲ.**
> ಸಚಿವರು, ಗದಗ.



**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ನೌಕರರು ತಮ್ಮಗೆ ಒದಗಿದ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಸಾರ್ವಜನಿಕರ ಸೇವೆ ಮಾಡಿ ಜನರ ಬದುಕನ್ನು ಹಸನಾಗಿಸುವ ಕಾರ್ಯವಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಭಾರತ ರತ್ನ ಪಂಡಿತ ಭೀಮಸೇನ ಜೋಶಿ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಇವರ ಸಂಯುಕ್ತಾಶ್ರಯದಲ್ಲಿ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಪ್ರಯುಕ್ತ 2023-24, 2024-25, 2025-26ನೇ ಸಾಲಿನ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಪಿಯುಸಿಯಲ್ಲಿ 31ನೇ ಸ್ಥಾನದಿಂದ 26ನೇ ಸ್ಥಾನಕ್ಕೆ ಜಿಲ್ಲೆಯ ಫಲಿತಾಂಶ ಮೇಲೇರಿದ್ದು ಸಾಧನೆಯಾಗಿದೆ. ಜಿಲ್ಲೆಯ ಅಧಿಕಾರಿಗಳು, ನೌಕರರು, ಶಿಕ್ಷಕರ ಶ್ರಮ ಈ ಸಾಧನೆಯಲ್ಲಿ ಅಡಗಿದೆ. ಜಿಲ್ಲೆಯ ಫಲಿತಾಂಶ ಒಂದಂಕಿಗೆ ಬರಬೇಕು. ಪ್ರಸಕ್ತ ವರ್ಷದ ಫಲಿತಾಂಶ ಸಾಧನೆ ಈಗಾಗಲೇ ನಮ್ಮಲ್ಲಿ ವಿಶ್ವಾಸ ಕುದುರಿಸಿದೆ. ಎಲ್ಲರಲ್ಲೂ ಆ ವಿಶ್ವಾಸ ಮೂಡಬೇಕು ಎಂದು ತಿಳಿಸಿದರು.

ಗದಗ ಜಿಲ್ಲೆಯಲ್ಲಿ ರಾಜಕೀಯವಾಗಿ ಸಾಮರಸ್ಯದ ವಾತವರಣವಿದೆ. ಸಾಮಾಜಿಕವಾಗಿ ಶೋಷಣೆ ಪ್ರಕರಣಗಳು ಜಿಲ್ಲೆಯಲ್ಲಿ ತುಂಬಾ ಕಡಿಮೆ ಇವೆ. ಅಭಿವೃದ್ಧಿ ವಿಚಾರದಲ್ಲಿ ಎಲ್ಲರೂ ಸಹಕಾರ ನೀಡುವರು. ಅಧಿಕಾರಿಗಳಿಗೆ ಕಾನೂನು ರೀತಿಯಲ್ಲಿ ಸಾರ್ವಜನಿಕರ ಸೇವೆ ಮಾಡಲು ಸಂಪೂರ್ಣ ಸಹಕಾರ ನೀಡುತ್ತೇವೆ. ಪರಿಶ್ರಮ ಪಡದೇ ಸಾಧನೆ ಅಸಾಧ್ಯ ಎಂಬುದನ್ನು ನಾವೆಲ್ಲರೂ ಅರಿತು ಶ್ರದ್ಧೆಯಿಂದ ಕ್ರೀಯಾಶೀಲರಾಗಿ ಕಾರ್ಯ ನಿರ್ವಹಿಸುವ ಅಬ್ಯಾಸ ಮಾಡಿಕೊಳ್ಳೋಣ ಎಂದರು.

ಸಾರ್ವಜನಿಕರನ್ನ ಗೌರವದಿಂದ ಕಾಣಬೇಕು. ಅವರ ಕೆಲಸ ಮಾಡಿಕೊಟ್ಟು ಸಂತೋಷ ಕಾಣಬೇಕು. ಜಿಲ್ಲೆಯಲ್ಲಿ ಉತ್ತಮ ಅಧಿಕಾರಿಗಳು ಕಾರ್ಯ ನಿರ್ವಹಿಸಿದ್ದಾರೆ. ಈಗಲೂ ಜಿಲ್ಲೆಯಲ್ಲಿ ಉತ್ತಮ ಅಧಿಕಾರಿಗಳು, ನೌಕರರು ಇದ್ದಾರೆ. ಇದು ಗದಗ ಜಿಲ್ಲೆಯ ಹೆಮ್ಮೆಯಾಗಿದೆ. ಸಾಧನೆಗೆ ಸಾವಿಲ್ಲ ಎಂಬುದನ್ನು ಅರಿತು ಮುನ್ನಡೆಯೋಣ ಎಂದು ಹೆಮ್ಮೆಯಿಂದ ಹೇಳಿದರು.

ಗದಗ ಜಿಲ್ಲೆಯಲ್ಲಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಶೇ.98, 99ರಷ್ಟು ಸಾಧನೆ ಮಾಡುವ ಮೂಲಕ ರಾಜ್ಯದಲ್ಲೇ ಉತ್ತಮ ಸ್ಥಾನ ಪಡೆದಿದೆ. ಇದೇ ನಿಟ್ಟಿನಲ್ಲಿ ವಿವಿಧ ರಂಗದಲ್ಲಿ ಸಾಧನೆ ಮಾಡೋಣ. ಸಾಧನೆಗೆ ಪ್ರಾಮಾಣಿಕತೆ, ▸▸3ನೇ ಪುಟಕ್ಕೆ

> ನೌಕರರು ಪ್ರತಿದಿನ ಒತ್ತಡದ ಮಧ್ಯದಲ್ಲೇ ಕಾರ್ಯ ನಿರ್ವಹಣೆ ಮಾಡುತ್ತಿದ್ದಾರೆ. ನಿವೃತ್ತಿಯಿಂದ ತೆರವಾದ 2.50 ಲಕ್ಷ ಹುದ್ದೆಗಳು ಖಾಲಿಯಿವೆ. ಅವುಗಳನ್ನು ತುಂಬುವ ಕಾರ್ಯ ಹಂತಹಂತವಾಗಿ ಆಗಲಿ. ನೌಕರರು ಒತ್ತಡ ನಿರ್ವಹಣಾ ಕೌಶಲ್ಯ ಬೆಳೆಸಿಕೊಳ್ಳಿ, ಆರೋಗ್ಯದ ಕಡೆಗೆ ಗಮನ ಹರಿಸಿ. ನೌಕರರ ಮೇಲೆ ಅನೇಕ ಟೀಕೆ ಟಿಪ್ಪಣಿಗಳು ಬರುತ್ತಿವೆ. ನಾವು ಆದಷ್ಟು ದೂರುಗಳು ಬರದಂತೆ ನಿಗಾ ವಹಿಸಿ ಎಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಕಿವಿಮಾತು ಹೇಳಿದರು.

## ಗಂಜಿ ಬಸವೇಶ್ವರ ಜಾತ್ರಾ ಮಹೋತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಉಸುಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ ದೇವರ 63ನೇ ವರ್ಷದ ಜಾತ್ರಾ ಮಹೋತ್ಸವ ಎಪ್ರಿಲ್ 30ರಂದು ನೆರವೇರಲಿದೆ. ಅಂದು ಬೆಳಿಗ್ಗೆ 8 ಗಂಟೆಗೆ ಮಹಾರುದ್ರಾಭಿಷೇಕ, ಜಗಜ್ಯೋತಿ ಬಸವೇಶ್ವರ ಹಾಗೂ ಜಗದ್ಗುರು ಏಕೋರಾಮಾರಾಧ್ಯರ ಭಾವಚಿತ್ರಗಳೊಂದಿಗೆ ನೂರಾರು ಜೋಡಿ ಎತ್ತುಗಳ ಭವ್ಯ ಮೆರವಣಿಗೆಯು ಸಕಲ ವಾದ್ಯ ವೈಭವ, ಕುಂಭಾರತಿಯೊಂದಿಗೆ ಶ್ರೀ ಗಂಜಿ ಬಸವೇಶ್ವರ ಮಂಗಲ ಮೂರ್ತಿಯ ಮಹಾ ಅಂದೋಲಿಕೋತ್ಸವವು ಗದಗ ಶಹರದ ಪ್ರಮುಖ ಬೀದಿಗಳಲ್ಲಿ ಬಹು ವಿಜ್ರಂಭಣೆಯಿಂದ ನಡೆಯಲಿದೆ. ನಂತರ ಸಾಯಂಕಾಲ 6 ಗಂಟೆಗೆ ಗಂಜೀ ಬಸವೇಶ್ವರ ಮಹಾರಥೋತ್ಸವ ಜರುಗುವುದು.




ಈ ಎಲ್ಲ ಕಾರ್ಯಕ್ರಮಗಳಲ್ಲಿ ಓಣಿಯ ಸಮಸ್ತ ನಾಗರಿಕರು, ಗುರುಹಿರಿಯರು ಪಾಲ್ಗೊಂಡು ಗಂಜಿ ಬಸವೇಶ್ವರ ದೇವರ ಕೃಪೆಗೆ ಪಾತ್ರರಾಗಬೇಕೆಂದು ಪ್ರಕಟಣೆ ವಿನಂತಿಸಿದೆ.

### ಸೊರಟೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಬೆಳೆಗಳಿಗೆ ರೈತರೇ ಬೆಲೆ ನಿರ್ಧರಿಸುವಂತಾಗಲಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ರೈತರು ಸಹಕಾರಿ ಸಂಘಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕಾನೂನು, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ಅವರು ಪಟ್ಟಣ ಸಮೀಪದ ಸೊರಟೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿ ಮಾತನಾಡುತ್ತಿದ್ದರು. ರೈತರು ತಾವು ಬೆಳೆದ ಬೆಳೆಗಳಿಗೆ ಎಂದು ತಾನೇ ಬೆಲೆಯನ್ನು ನಿರ್ಧರಿಸುತ್ತಾನೋ ಅಂದು ರೈತರ ಅಭಿವೃದ್ಧಿ ಹೊಂದಲು ಸಾಧ್ಯ. ಅಂದು ಸಿದ್ದನಗೌಡ ಪಾಟೀಲರು ರೈತರ ಆರ್ಥಿಕ ಅಭಿವೃದ್ಧಿಗಾಗಿ ಸಹಕಾರಿ ಸಂಘಗಳನ್ನು ಸ್ಥಾಪಿಸುವ ಮೂಲಕ ರೈತರ ಏಳಿಗಾಗಿ ನಿಸ್ವಾರ್ಥ ಸೇವೆಗೈದು ನಾಡಿಗೆ ಬೆಳಕು ನೀಡಿದವರು. ಇದರ ಪ್ರತಿಫಲವಾಗಿ ಮಲ್ಲಪ್ಪ ಕಲಗುಡಿ ಅವರ ಅಧ್ಯಕ್ಷತೆಯಲ್ಲಿ ಸಹಕಾರಿ ಸಂಘದ ನಿಸ್ವಾರ್ಥ ಸೇವೆ, ಸತತ ಪ್ರಯತ್ನ, ರೈತರ ಬಗ್ಗೆ ವಿಶೇಷ ಕಾಳಜಿಯ ಫಲವಾಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದಿಂದ ಎಲ್ಲಾ ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ನೀಡುವ ಮೂಲಕ ರೈತರನ್ನು ಹಾಗೂ ಸಂಘವನ್ನು ಆರ್ಥಿಕವಾಗಿ ಸದೃಢವಾಗಿಸಿದ ಕಾರ್ಯ ಶ್ಲಾಘನೀಯ ಎಂದರು.




ಅಧ್ಯಕ್ಷತೆಯನ್ನು ಸೊರಟೂರ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಂ.ಎಫ್. ಕಲಗುಡಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನರಗುಂದ ಮಾಜಿ ಶಾಸಕ ಬಿ.ಆರ್. ಯಾವಗಲ್ಲ, ಮಾಜಿ ಶಾಸಕ ಡಿ.ಆರ್. ಪಾಟೀಲ್, ಗ್ರಾ.ಪಂ ಅಧ್ಯಕ್ಷರಾದ ಚಂದ್ರಮ್ಮ ಓಂಕಾರಿ, ಸೊರಟೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಉಪಾಧ್ಯಕ್ಷ ಪಿ.ವಾಯ್. ಮಲ್ಲಾರಿ, ನಾಗಾವಿ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಬಿ.ಆರ್. ದೇವರೆಡ್ಡಿ, ಜಿ.ಪಂ ಸ್ವಚ್ಛ ಭಾರತ ಮಿಷನ್ ಸಮಾಲೋಚಕ ಎಚ್.ಎಫ್. ಕುಸಣ್ಣವರ, ಅಪ್ಪಣ್ಣಾ ಇನಾಮತಿ, ಸಿ.ಬಿ. ದೊಡ್ಡಗೌಡರ, ವಾಸಣ್ಣಾ ಕುರಡಗಿ, ಶಿವಕುಮಾರಗೌಡ ಪಾಟೀಲ, ಜಿ.ಪಿ. ಪಾಟೀಲ, ಪರಶುರಾಮ ಹೂಗಾರ ಇದ್ದರು.

> ಮಾಜಿ ಸಹಕಾರಿ ಸಚಿವ ಎಸ್.ಎಸ್. ಪಾಟೀಲ ಮಾತನಾಡಿ, ರೈತರು ಆರ್ಥಿಕವಾಗಿ ಸದೃಢರಾಗಲು ಸಹಕಾರಿ ಸಂಘಗಳ ಸಹಾಯ-ಸಹಕಾರವನ್ನು ಪಡೆದುಕೊಳ್ಳಬೇಕು. ರೈತರು ಸಕಾಲದಲ್ಲಿ ಸಾಲಗಳನ್ನು ಮರುಪಾವತಿ ಮಾಡಿದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ಸಹ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಸಹಕಾರಿ ಸಂಘಗಳ ಅಳಿವು-ಉಳಿವು ಸಂಘದ ಸಿಬ್ಬಂದಿಗಳ ಕೈಯಲ್ಲಿದೆ. ಆಡಳಿತ ಮಂಡಳಿ ಹಾಗೂ ರೈತರು, ಶೇರುದಾರರು ಸಂಘ-ಸಂಸ್ಥೆಗಳ ಎಲ್ಲರೊಂದಿಗೂ ಸಹಕಾರಿ ಮನೋಭಾವನೆ ಬೆಳೆಸಿಕೊಂಡು ಸಾಗಬೇಕು ಎಂದರು.

## ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ ಬಸವರಾಜ ಬಳ್ಳಾರಿ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಗದಗ ತಾಲೂಕು ಕಲ್ಯಾಣಾಧಿಕಾರಿ ಡಾ. ಬಸವರಾಜ ಬಳ್ಳಾರಿ ಆಯ್ಕೆಯಾಗಿದ್ದಾರೆ.

ಮಂಗಳವಾರ ಜಿಲ್ಲಾ ಘಟಕದ ಅಧ್ಯಕ್ಷ ರವಿ ಗುಂಜೀಕರ್ ಅಧ್ಯಕ್ಷತೆಯಲ್ಲಿ ನಡೆದ ತುರ್ತು ಕಾರ್ಯಕಾರಿ ಸಮಿತಿ ಸಭೆಯಲ್ಲಿ, ಡಾ. ಬಸವರಾಜ್ ಬಳ್ಳಾರಿ ಬಹುಮತದ ಮೂಲಕ ಆಯ್ಕೆಯಾದರು. ಕಾರ್ಯಕಾರಿ ಸಮಿತಿಯ ಶೇ. 90ರಷ್ಟು ಸದಸ್ಯರು ಕೈ ಎತ್ತುವ ಮೂಲಕ ಡಾ. ಬಸವರಾಜ ಬಳ್ಳಾರಿ ಅವರಿಗೆ ಬೆಂಬಲ ಸೂಚಿಸಿದರು.

ಹಾಲಿ ಜಿಲ್ಲಾಧ್ಯಕ್ಷ ರವಿ ಗುಂಜೀಕರ್ ಅವರು ಎ. 30ರಂದು ಸೇವಾ ನಿವೃತ್ತಿ ಆಗುತ್ತಿರುವ ಹಿನ್ನೆಲೆಯಲ್ಲಿ, ಮುಂದಿನ ಅಧ್ಯಕ್ಷರ ಆಯ್ಕೆಗಾಗಿ ತುರ್ತು ಕಾರ್ಯಕಾರಿ ಸಮಿತಿ ಸಭೆ ಕರೆದು, ಹೊಸ ಜಿಲ್ಲಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಕೈಗೊಂಡರು. ಕಾರ್ಯಕಾರಿ ಸಮಿತಿಯ ಬಹುತೇಕ ಸದಸ್ಯರು ಡಾ. ಬಸವರಾಜ ಬಳ್ಳಾರಿ ಅವರಿಗೆ ಬೆಂಬಲ ಸೂಚಿಸಿದರು.

ಡಾ. ಬಸವರಾಜ ಬಳ್ಳಾರಿ ಸದ್ಯ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿಯಾಗಿದ್ದು, ಸದ್ಯ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿದ್ದು, ಅವರ ಅಭಿಮಾನಿಗಳಿಗೆ ಸಂಭ್ರಮ ಉಂಟು ಮಾಡಿದೆ.

## ಕುಡಿಯುವ ನೀರಿನಲ್ಲಿ ಜೊಂಡು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣಕ್ಕೆ ಪೂರೈಕೆಯಾಗುವ ತುಂಗಭದ್ರಾ ಕುಡಿಯುವ ನೀರು ಕಳೆದ 20-30 ದಿನಗಳಿಂದಲೂ ಸ್ಥಗಿತಗೊಂಡಿತ್ತು. ಕಳೆದ ಎರಡು ದಿನಗಳಿಂದ ಅಲ್ಲಲ್ಲಿ ನೀರು ಪೂರೈಕೆ ಮಾಡಲಾಗುತ್ತಿದ್ದು, ಮಂಗಳವಾರ ಪಟ್ಟಣದ ವಾರ್ಡ್ ನಂ.6ರಲ್ಲಿ ಪೂರೈಕೆಯಾದ ಕುಡಿಯುವ ನೀರನ್ನು ನೋಡಿದ ಜನರು ಕಂಗಾಲಾಗಿದ್ದಾರೆ.

ನೀರು ಪೂರೈಕೆಯಾದರೆ ಸಾಕು ಎನ್ನುವ ಸ್ಥಿತಿಯಲ್ಲಿದ್ದ ಜನರು, ನೀರು ಬಿಟ್ಟ ತಕ್ಷಣ ತುಂಬಿಸಿಕೊಳ್ಳುವದರಲ್ಲಿ ನಿರತರಾಗಿದ್ದಾರೆ. ಮಹೇಶ ಕಲಘಟಗಿ ಎನ್ನುವರ ಮನೆಯಲ್ಲಿ ನೀರು ತುಂಬಿಸುತ್ತಿದ್ದಾಗ ವಾಸನೆ ಬರತೊಡಗಿತ್ತು. ಪೂರೈಕೆಯಾದ ನೀರಿನ ಮೇಲೆ ಜೊಂಡು ಕಂಡುಬಂದಿದ್ದಲ್ಲದೆ, ನೀರು ವಾಸನೆಯಿಂದಲೂ ಕೂಡಿದೆ. ಕೂಡಲೇ ಮುಖ್ಯಾಧಿಕಾರಿಗಳಿಗೆ ಕರೆ ಮಾಡಿ, ಇಂತಹ ನೀರು ಕುಡಿಯುವದು ಹೇಗೆ ಎಂದು ಪ್ರಶ್ನಿಸಿದ್ದಾರೆ. ಕೆಲ ಹೊತ್ತು ಗಲೀಜು ನೀರು ಬಂದು ನಂತರ ಸ್ವಚ್ಛ ನೀರು ಬಂದಿದೆ ಎನ್ನಲಾಗಿದೆ.

ನೀರು ಪೂರೈಕೆ ನಿರ್ವಹಣೆಯಲ್ಲಿ ಪುರಸಭೆಯ ನಿರ್ಲಕ್ಷ್ಯ ಎದ್ದು ಕಾಣುತ್ತಿದ್ದು, ಈ ಕುರಿತು ಅಗತ್ಯ ಕ್ರಮಗಳನ್ನು ಕೈಗೊಂಡು ಜನರಿಗೆ ವಾರಕ್ಕೊಮ್ಮೆ ನೀರು ಪೂರೈಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು, ಜನಪ್ರತಿನಿಧಿಗಳು ಕ್ರಮ ಕೈಗೊಳ್ಳಬೇಕೆಂದು ಮಹೇಶ ಕಲಘಟಗಿ ಮತ್ತು ರಮೇಶ ತೊರಗಲ್ ಒತ್ತಾಯಿಸಿದ್ದಾರೆ.

## ಇಂದಿನ ನೀರು ಪೂರೈಕೆಯಲ್ಲಿ ವ್ಯತ್ಯಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೆನೆಂದರೆ, ಅವಳಿ ನಗರಕ್ಕೆ ನೀರು ಪೂರೈಕೆ ಮಾಡುವ ಡಬ್ಲ್ಯೂ.ಟಿ.ಪಿ. ಪಾಪನಾಶಿಯಿಂದ ಗದಗ ಭಾಗಕ್ಕೆ ಬರುವ ಮುಖ್ಯ ಕೊಳವೆ ಮಾರ್ಗದಲ್ಲಿ ದುರಸ್ತಿ ಕಾರ್ಯ ಕೈಗೊಂಡಿದ್ದು, ಎಪ್ರಿಲ್ 30ರಂದು ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವುದು. ಹೀಗಾಗಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷ್ಣ ಭೈರೇಗೌಡ ದಂಪತಿಗೆ ಮಹಾ ಮಾನವತಾವಾದಿ ಪ್ರಶಸ್ತಿ ಪ್ರದಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಜನಸಾಮಾನ್ಯರ ಸಮಸ್ಯೆಗೆ ಸದಾ ಸ್ಪಂದಿಸುವ, ಯಾರ ಬಗ್ಗೆಯೂ ಲಘುವಾಗಿ ಮಾತನಾಡದ ಗಂಭೀರ ವ್ಯಕ್ತಿತ್ವದ ಅಪರೂಪ ರಾಜಕಾರಣಿ ಕೃಷ್ಣ ಭೈರೇಗೌಡ ಎಂದು ಕಾನೂನು ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಮಂಗಳವಾರ ನಗರದ ತೋಂಟದಾರ್ಯ ಮಠದಲ್ಲಿ ಬಸವ ಜಯಂತಿ ಅಂಗವಾಗಿ ಲಕ್ಷ್ಮೇಶ್ವರದ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಕೊಡಮಾಡುವ ಮಹಾಮಾನವತಾವಾದಿ ಬಸವೇಶ್ವರ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.


ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು ಸಚಿವ ಸಂಪುಟದಲ್ಲಿ ಅನೇಕ ಜಟಿಲ ವಿಷಯಗಳಿಗೆ ಪರಿಹಾರ ಸೂಚಿಸಿ ಗಮನ ಸೆಳೆದಿದ್ದಾರೆ. ಸ್ವತಃ ಮುಖ್ಯಮಂತ್ರಿಗಳೆ ಕೃಷ್ಣ ಭೈರೇಗೌಡ ಅವರನ್ನು ಸಲಹೆ ಕೇಳುವಷ್ಟು ಪಾಂಡಿತ್ಯ ಸಂಪಾದಿಸಿದ್ದಾರೆ. ಅವರ ಸಾಮರ್ಥ್ಯದ ಹಿಂದಿನ ಶಕ್ತಿ ಅವರ ಧರ್ಮಪತ್ನಿ ಮೀನಾಕ್ಷಿ ಮುಖ್ಯ ಕಾರಣ. ಅಂಥ ದಂಪತಿಗೆ ಮಹಾ ಮಾನವತಾವಾದಿ ಬಸವೇಶ್ವರ ಪ್ರಶಸ್ತಿ ನೀಡಿರುವುದು ಸೂಕ್ತವಾಗಿದೆ ಎಂದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಕಂದಾಯ ಸಚಿವ ಕೃಷ್ಣ ಭೈರೇಗೌಡ, ರಾಜಕೀಯ ಜೀವನ ಸವಾಲುಗಳಿಂದ ಕೂಡಿದೆ. ನಾನು ಸಹ ಹೊಂದಾಣಿಕೆ ಮಾಡಿಕೊಂಡಿದ್ದೇನೆ. ನಾನೇನು ಪೂರ್ಣ ಪ್ರಾಮಾಣಿಕ, ಅಪರಂಜಿ ಅಲ್ಲವೇ ಅಲ್ಲ. ▸▸3ನೇ ಪುಟಕ್ಕೆ

> ತೋಂಟದಾರ್ಯ ಮಠ ಮತ್ತು ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನ ನೀಡಿದ ಮಹಾ ಮಾನವತಾವಾದಿ ಬಸವೇಶ್ವರ ಪ್ರಶಸ್ತಿ ಖುಷಿ ತಂದಿದೆ. ಪ್ರಶಸ್ತಿಯ ಮೊತ್ತವನ್ನು ಬ್ಯಾಟರಾಯನಪುರ ಕ್ಷೇತ್ರದ ಕೊಳಚೆ ಪ್ರದೇಶದ ಸರಕಾರಿ ಶಾಲೆಗಳ ಅಭಿವೃದ್ಧಿಗೆ ಬಳಕೆ ಮಾಡುತ್ತೇವೆ.
>
> **–ಮೀನಾಕ್ಷಿ ಕೃಷ್ಣ ಭೈರೇಗೌಡ**

ಕವನ

## ಸಾಂಸ್ಕೃತಿಕ ನಾಯಕರು



ಮಾನವೀಯತೆಯ ಸಾಕಾರರು
ಸರ್ವಸಮಾನತೆಯ ಹರಿಕಾರರು
ಜಗದೋದ್ಧಾರಕ ವಿಶ್ವಮಾನವರು
ಭಕ್ತಿಭಂಡಾರಿ ಬಸವಣ್ಣನವರು /1/

ಮಾನವಧರ್ಮ ಉದ್ಧಾರ ಪ್ರಿಯರು
ತಾರತಮ್ಯ ಅಸಮಾನತೆ ನಿವಾರಣೆ ಪ್ರೇರಕರು
ವಿಶ್ವ ಮಹಾನ್ ಮಾನವತಾವಾದಿವರ್ಯರು
ಇವನಮ್ಮವ ಇವನಮ್ಮವನೆನಿಸಿಹರು /2/

ವೈಚಾರಿಕ ವೈಜ್ಞಾನಿಕ ಧುರೀಣರು
ಮೌಢ್ಯಾಚರಣೆ ವಿರೋಧಿಸಿಹರು
ಶತಶತಮಾನಗಳ ಅಂಟು ಜಾಡ್ಯ ನಿವಾರಕರು
ಮುಗ್ಧರನು ಜಾಗೃತರನ್ನಾಗಿಸಿಹರು /3/

ಜಾತಿ ತಾರತಮ್ಯಕೆ ರಾಮಬಾಣರು
ಸಮಾಜಮುಖಿ ಹಿತಚಿಂತಕರು
ಮನುಕುಲಕೆ ಸನ್ಮಾರ್ಗ ನಿರ್ಮಿಸಿಹರು
ಸ್ತ್ರೀ ಕುಲೋದ್ಧಾರಕ ಮಾತೃಹೃದಯವಂತರು /4/

ಪೂರ್ವಾಗ್ರಹ ಪೀಡಿತರನು ಖಂಡಿಸಿಹರು
ಕಂದಾಚಾರದ ಬಂಡಾಯಗಾರರು
ಅನುಭವಮಂಟಪ ಸಂಸ್ಥಾಪಕರು
ಸಾರ್ವಕಾಲಿಕ ಜೀವನ ಮೌಲ್ಯ ಪ್ರತಿಪಾದಕರು /5/

ಬುದ್ಧ ಬಸವ ಗಾಂಧಿ ಅಂಬೇಡ್ಕರರು
ಜಾಗತಿಕ ಮಹಾನ್ ದಾರ್ಶನಿಕವರೇಣ್ಯರು
ನಡೆನುಡಿ ಅರಿವು ಆಚಾರ ಪರಿಪಾಲಕರು
ಸಾಂಸ್ಕೃತಿಕ ನಾಯಕ ಬಸವಣ್ಣನವರು /6/



**– ಪ್ರೊ. ಶಕುಂತಲಾ ಚನ್ನಪ್ಪ ಸಿಂಧೂರ.**

---

**ಇಂದು 'ಬಸವೇಶ್ವರ ಜಯಂತಿ'ಯ ನಿಮಿತ್ತ ವಿಶೇಷ ಲೇಖನ**

# ಮಹಾಪುರುಷ, ಜಗಜ್ಯೋತಿ ಬಸವೇಶ್ವರರು


ಭಕ್ತಿ ಭಂಡಾರಿ, ಸಾಮಾಜಿಕ ಆಂದೋಲನಕಾರ, ಮಹಾನ್ ಮಾನವತಾವಾದಿ, ಬಹುಮುಖ ವ್ಯಕ್ತಿತ್ವದ ಅಪೂರ್ವ ವ್ಯಕ್ತಿ, ಸಮಭಾವದ ಶಕ್ತಿ ಬಸವೇಶ್ವರರು. 12ನೇ ಶತಮಾನದಲ್ಲಿದ್ದ ಪ್ರಸಿದ್ಧ ವಚನಕಾರ, ಸಮಾಜ ಸುಧಾರಕ. ಅನುಭವ ಮಂಟಪದ ರೂವಾರಿ. ಧಾರ್ಮಿಕ, ಸಾಮಾಜಿಕ ಮಹಾಕ್ರಾಂತಿಯ ನೇತಾರರಾದ ಬಸವಣ್ಣನವರ ಜೀವನ ಹಾಗೂ ಅವರ ವಿಚಾರಧಾರೆಗಳೇ ಸರ್ವಕಾಲಿಕ ಸತ್ಯಗಳಾಗಿವೆ.

ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ನಾವೆಲ್ಲರೂ ಹೆಮ್ಮೆಪಡುವ ಈ ಮಹಾನ್ ವ್ಯಕ್ತಿತ್ವ ಕನ್ನಡ ನಾಡಿನ ಗೌರವದ ಪ್ರತೀಕ. ಇವರು 1131ರಲ್ಲಿ ಬಿಜಾಪುರ ಜಿಲ್ಲೆಯ ಬಾಗೇವಾಡಿ ಸಮೀಪದ ಇಂಗಳೇಶ್ವರದಲ್ಲಿ ವೈಶಾಖ ಮಾಸದ ಅಕ್ಷಯ ತೃತೀಯ ದಿನದಂದು ಜನಿಸಿದರು. ತಂದೆ ಮಾದರಸ ಹಾಗೂ ತಾಯಿ ಮಾದಲಾಂಬಿಕೆ. ಮುಂದೆ ವೈದಿಕ ಧರ್ಮವನ್ನು ತೊರೆದು ಹುಟ್ಟಿದಾಗಲೇ ನನಗೆ ಲಿಂಗದೀಕ್ಷೆಯಾಗಿದೆ ಎಂದು ಮನೆ, ಸ್ವಜನರನ್ನು ತೊರೆದು ಕಪ್ಪಡಿ(ಸಂಗಮೇಶ್ವರ)ಕ್ಕೆ ತೆರಳಿದರು.

ಶೈವ ಸಂತರಾದ ವಿದ್ವನ್ಮಣಿ ಜಾತವೇದ ಮುನಿಗಳಲ್ಲಿ ಶಿಷ್ಯರಾದರು. ಬಸವಣ್ಣನವರಿಗೆ ಗಂಗಾಂಬಿಕೆ ಹಾಗೂ ನೀಲಾಂಬಿಕೆ ಎಂಬ ಇಬ್ಬರು ಮಡದಿಯರು. ಕಳಚೂರಿ ಅರಸ ಬಿಜ್ಜಳನ ಆಹ್ವಾನದ ಮೇರೆಗೆ ಕಲ್ಯಾಣವನ್ನು ಸೇರಿ ಮಂತ್ರಿಯಾದರು. ಬಿಜ್ಜಳನ ಆಸ್ಥಾನದಲ್ಲಿ ಮಂತ್ರಿಯಾಗಿದ್ದುಕೊಂಡು ಅನೇಕ ಸಾಮಾಜಿಕ ಕಾರ್ಯಗಳನ್ನು ಕೈಗೊಂಡರು. 12ನೇ ಶತಮಾನದಲ್ಲಿ ಜಾತಿ ಭೇದ, ಧಾರ್ಮಿಕ ಅಂಧಾನುಕರಣೆ ವಿಶೇಷವಾದ ಕಾಲದಲ್ಲಿ ಇಂತಹ ಸಾಮಾಜಿಕ ಅನಿಷ್ಟದ ವಿರುದ್ಧ ಕ್ರಾಂತಿಯನ್ನೇ ಆರಂಭಿಸಿದರು, ಅಂತರ್ಜಾತಿ ವಿವಾಹ ಜಾರಿಗೆ ತಂದರು.

ಬಸವೇಶ್ವರರ ದೃಷ್ಟಿಯಲ್ಲಿ ಇಡೀ ಮಾನವ ಜನಾಂಗವೇ ಒಂದು ಕುಟುಂಬವಿದ್ದಂತೆ. ಯಾವುದೇ ತಾರತಮ್ಯವಿಲ್ಲದೆ ಜಾತಿಭೇದವನ್ನು ಖಂಡಿಸಿ ಸಕಲರಿಗೂ ಲೇಸನ್ನು ಬಯಸಿದರು. 'ಕೊಲುವವನೇ ಮಾದಿಗ, ಹೊಲಸು ತಿನ್ನುವವನೇ ಹೊಲೆಯ' ಎಂದರು. ಡಾಂಬಿಕತೆಯಿಂದ ಕೂಡಿದ ಮೂಢಾಚಾರಗಳ ವಿರುದ್ಧ ಕ್ರಾಂತಿಯನ್ನು ಹೂಡಿದರು. ಸಮಾಜದಲ್ಲಿ ಅಂತ್ಯಜರೆಂದು ದೂರೀಕರಿಸಲ್ಪಟ್ಟ ಹರಿಜನರಿಗೆ ಶಿವ ದೀಕ್ಷೆಯನ್ನು ನೀಡಿದರು. ಬಸವಣ್ಣನವರ ಸಾರಥ್ಯದಲ್ಲಿ 12ನೇ ಶತಮಾನದ ಸಮಾಜದಲ್ಲಿದ್ದ ಅನೇಕ ಅನಿಷ್ಟ ಪದ್ಧತಿಗಳು ಹಾಗೂ ಸಾಮಾಜಿಕ ಅಸಮಾನತೆಗಳನ್ನು ತೊಡೆದು ಹಾಕಲು ಅಂದಿನ ಎಲ್ಲ ಶರಣ-ಶರಣೆಯರು ಒಂದೆಡೆ ಸೇರಿ 'ಅನುಭವ ಮಂಟಪ'ದಲ್ಲಿ ವಿಚಾರ ಗೋಷ್ಠಿಗಳನ್ನು ನಡೆಸುತ್ತಿದ್ದರು.

ಅನುಭವ ಮಂಟಪದ ಕಾರ್ಯ ಕಲಾಪಗಳಿಂದ ಶರಣರ ಸ್ವಾನುಭವ ವಿಚಾರಗಳಾದ ಜಾತಿ-ಮತ-ಪಂಥಗಳ




ಬಂಧನದ ಮೇಲೆ ಹರಿತವಾದ ವಿಚಾರಧಾರೆ ನಡೆದು ದಿವ್ಯಜ್ಞಾನ ಉಂಟಾಗಲು ಕಾರಣವಾಯಿತು. ಮಹಾನುಭಾವಿ ಬಸವೇಶ್ವರರು ಜಗತ್ತಿಗೆ ಕೊಟ್ಟ ಅನೇಕ ಕಾಣಿಕೆಯಲ್ಲಿ ಅನುಭವ ಮಂಟಪವೂ ಒಂದು. ಇದು ಜಗತ್ತಿನ ಪ್ರಪ್ರಥಮ 'ಪಾರ್ಲಿಮೆಂಟ್' ಎಂದು ಕರೆಸಿಕೊಂಡಿದೆ. ಅನುಭವ ಮಂಟಪದಲ್ಲಿ ಸ್ತ್ರೀಯರಿಗೂ ಭಾಗವಹಿಸಲು ಸಮಾನವಾದ ಸ್ಥಾನಮಾನವನ್ನು ಕಲ್ಪಿಸಿಕೊಟ್ಟಿರುವುದಕ್ಕೆ ಆಧ್ಯಾತ್ಮಿಕ ಕ್ಷೇತ್ರದ ಧ್ರುವತಾರೆ ಶರಣೆ ಅಕ್ಕಮಹಾದೇವಿಯವರು ಹಾಗೂ ಇತರ ಶರಣೆಯರು ಸಾಕ್ಷಿಯಾಗಿದ್ದಾರೆ. ಅಂದು ನವ ಸಮಾಜದ ನಿರ್ಮಾಣಕ್ಕಾಗಿ ಬಸವಣ್ಣನವರು ಸತ್ಯ ಶುದ್ಧ ಕಾಯಕ ಮತ್ತು ದಾಸೋಹ ತತ್ವ, ಸ್ತ್ರೀ ಸಮಾನತೆ, ವೈಚಾರಿಕ ಚಿಂತನೆ, ಜಾತ್ಯತೀತ ಸಮಾಜದ ಕಲ್ಪನೆ, ದಯವೇ ಧರ್ಮದ ಮೂಲ, ನಡೆ-ನುಡಿಯೇ ಸಮನ್ವಯತೆ ಸಮಾಜದ ನೈಜ ದರ್ಶನ, ದೇಹವೇ ದೇವಾಲಯ ಹೀಗೆ ಹಲವಾರು ಪರಿಕಲ್ಪನೆಗಳ ಮೇಲೆ ಬಸವಣ್ಣನವರು ವಚನಗಳ ಕ್ರಾಂತಿಯನ್ನೇ ಮಾಡಿದ್ದಾರೆ.

ಕೂಡಲ ಸಂಗಮದೇವ ಎಂಬ ವಚನಾಂಕಿತದಿಂದ ಇವರ ವಚನಗಳು ಎಲ್ಲರ ಮನದ ಪರಿವರ್ತನೆಗೆ ಹಾಗೂ ಸದೃಢ ಸಮಾಜದ ನಿರ್ಮಾಣಕ್ಕೆ ದಾರಿದೀಪಗಳಾಗಿವೆ.

'ದಯೆಯಿಲ್ಲದ ಧರ್ಮ ಯಾವುದಯ್ಯ ದಯೆ ಬೇಕು ಸಕಲ ಪ್ರಾಣಿಗಳಲ್ಲಿ ದಯವೇ ಧರ್ಮದ ಮೂಲವಯ್ಯಾ', 'ಲೋಕದ ಡೊಂಕ ನೀವೇಕೆ ತಿದ್ದುವಿರಿ, ನಿಮ್ಮ ನಿಮ್ಮ ತನುವ ಸಂತೈಸಿಕೊಳ್ಳಿ, ನಿಮ್ಮ ನಿಮ್ಮ ಮನವ ಸಂತೈಸಿಕೊಳ್ಳಿ, ನೆರೆಮನೆಯ ದುಃಖಕ್ಕೆ ಅಳುವವರ ಮೆಚ್ಚ ಕೂಡಲ ಸಂಗಮದೇವ...' ಹೀಗೆ ಬಸವಣ್ಣನವರು ಹಲವಾರು ವಚನಗಳ ಮೂಲಕ ಸಮಾಜದ ಅಂಕು-ಡೊಂಕುಗಳನ್ನು ತಿದ್ದುವಲ್ಲಿ, ಮನುಷ್ಯನ ಮನಸ್ಥಿತಿಯನ್ನು ಸುಧಾರಿಸುವಲ್ಲಿ ಪ್ರಯತ್ನಿಸಿದ್ದಾರೆ.

ಇಂತಹ ಮಹಾ ಮಾನವತಾವಾದಿ ಬಸವಣ್ಣನವರ ಕೀರ್ತಿ ದಿನ ದಿನಕ್ಕೂ ಉತ್ತುಂಗ ಶಿಖರಕ್ಕೆ ಏರುತ್ತಾ ಹೋದಾಗ ಕಲ್ಯಾಣದಲ್ಲಿ ಅನುಭವ ಮಂಟಪದ ಕೀರ್ತಿಯಿಂದ ಕಲ್ಯಾಣವೇ ಬಸವೇಶ್ವರರು, ಬಸವೇಶ್ವರರೇ ಕಲ್ಯಾಣ ಎನ್ನುವಂತಾಯಿತು. ಆದರೆ ಕೆಲವು ಆಸ್ಥಾನಿಕರು ಈ ಏಳಿಗೆಯನ್ನು ಸಹಿಸದೆ ಬಿಜಳ್ಳನಲಿ ಬಂದು ಬಸವಣ್ಣನವರ ಕುರಿತು ಆರೋಪಿಸಿದರು. ಆಗ ಬಸವಣ್ಣನವರನ್ನು ಆಸ್ಥಾನದಿಂದ ಹೊರಹಾಕಲಾಯಿತು.

ಕಲ್ಯಾಣದಿಂದ ಹೊರ ಬಂದ ಬಸವೇಶ್ವರರು ಕೂಡಲ ಸಂಗಮವನ್ನು ಸೇರಿದರು. ಇವರ ನಿರ್ಗಮನದಿಂದ ನೊಂದ ಜನ ಕ್ಷೋಭೆಗೊಂಡು ಬಿಜ್ಜಳನ ಕೊಲೆಯಾಯಿತು. ಆದರೆ ಬಸವಣ್ಣನವರು ಈ ಸುದ್ದಿಯನ್ನು ಕೇಳಿ ಮನನೊಂದು ಕೂಡಲ ಸಂಗಮೇಶ್ವರನಲ್ಲಿ ಐಕ್ಯರಾದರು ಎಂಬುದು ಐಹಿತ್ಯದ ಮೂಲಕ ನಮಗೆ ತಿಳಿದುಬರುತ್ತದೆ. ಜಗತ್ತಿನ ಇತಿಹಾಸದಲ್ಲೇ ಅವರ ಮಹಾನ್ ವ್ಯಕ್ತಿತ್ವ ಎಲ್ಲ ಕಾಲ, ಎಲ್ಲ ಸಮಾಜ, ಎಲ್ಲಾ ಜನಕ್ಕೂ ಆದರಣೀಯವಾಗಿದೆ. ಬಸವಣ್ಣನವರ ಬದುಕು-ವಿಚಾರಧಾರೆಗಳು, ಮೌಲ್ಯಗಳು, ಆದರ್ಶಗಳು, ಸಿದ್ಧಾಂತಗಳು, ತತ್ವಗಳು ಎಲ್ಲವೂ ಮನುಕುಲದ ಏಳಿಗೆಗೆ ಅವಶ್ಯವಾಗಿವೆ.



**– ಸುಧಾ ಹುಚ್ಚಣ್ಣವರ.**
**ಉಪನ್ಯಾಸಕರು, ಶಿರಹಟ್ಟಿ.**

---

**ದೃಷ್ಟಿ ಕೇಂದ್ರದ ಉದ್ಘಾಟನೆ ನೆರವೇರಿಸಿದ ಶ್ರೀ ಫಕೀರ ಸಿದ್ಧರಾಮ ಮಹಾಸ್ವಾಮಿಗಳು**

# ನೇತ್ರಾಲಯದ ಸದುಪಯೋಗವಾಗಲಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಲ್ಲ ಇಂದ್ರಿಯಗಳಲ್ಲಿ ನೇತ್ರ ಅತಿ ಮುಖ್ಯವಾದ ಇಂದ್ರಿಯವಾಗಿದ್ದು, ನೇತ್ರದ ಬಗ್ಗೆ ನಿಷ್ಕಾಳಜಿ ವಹಿಸಿದರೆ ಅಂಧತ್ವಕ್ಕೆ ಎಡೆ ಮಾಡಿಕೊಡಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಪದ್ಮಶ್ರೀ ಡಾ. ಎಂ.ಎಂ. ಜೋಶಿ ಅವರು ಜನರ ನೇತ್ರದ ಬಗ್ಗೆ ಕಾಳಜಿ ಮಾಡುವ ಮೂಲಕ ಸಮಾಜಕ್ಕೆ ಅತ್ಯಮೂಲ್ಯ ಕೊಡುಗೆ ನೀಡುತ್ತಿದ್ದಾರೆ ಎಂದು ಶಿರಹಟ್ಟಿ ಸಂಸ್ಥಾನಮಠದ ಶ್ರೀ ಫಕೀರ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

> ನೇತ್ರದ ಸಮಸ್ಯೆಗಳ ಬಗ್ಗೆ ಹಳ್ಳಿ ಹಳ್ಳಿಗಳಿಗೆ ಹೋಗಿ ಅವರಿಗೆ ಉಚಿತ ಚಿಕಿತ್ಸೆ ನೀಡುವ ಬಹುದೊಡ್ಡ ಪರೋಪಕಾರಿ ಕಾರ್ಯವನ್ನು ಡಾ. ಎಂ.ಎಂ. ಜೋಶಿಯವರು ಈ ನಾಡಿಗೆ ನೀಡುತ್ತಿದ್ದಾರೆ. ಇದೀಗ ಪ್ರಾರಂಭವಾಗಿರುವ ನೇತ್ರಾಲಯ ಎಲ್ಲರಿಗೂ ಅನುಕೂಲವಾಗಲಿದ್ದು, ಜನರು ಪ್ರಯೋಜನ ಪಡೆಯುವಂತೆ ಶ್ರೀ ಫಕೀರ ಸಿದ್ಧರಾಮ ಮಹಾಸ್ವಾಮಿಗಳು ಕರೆ ನೀಡಿದರು.

ಅವರು ಮಂಗಳವಾರ ಪಟ್ಟಣದ ಶ್ರೀ ಫಕೀರೇಶ್ವರ ಮಠದ ಆವರಣದಲ್ಲಿ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ, ಪದ್ಮಶ್ರೀ ಡಾ. ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ, ಎಸ್.ಜಿ.ಎಂ ನೇತ್ರ ಭಂಡಾರ ಹಾಗೂ ಸಂಶೋಧನಾ ಪ್ರತಿಷ್ಠಾನ ಮತ್ತು ಮಹಾದೇವ ಕರಮರಿ ಚಾರಿಟೇಬಲ್ ಟ್ರಸ್ಟ್ ಇವರ ಸಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಉಚಿತ ನೇತ್ರ ತಪಾಸಣೆ ಮತ್ತು ಶಸ್ತ್ರಚಿಕಿತ್ಸಾ ಶಿಬಿರ ಹಾಗೂ ದೃಷ್ಟಿ ಕೇಂದ್ರದ ಉದ್ಘಾಟನೆಯನ್ನು ನೆರವೇರಿಸಿ, ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ವಹಿಸಿ ಮಾತನಾಡಿದರು.

ಡಾ. ಶ್ರೀನಿವಾಸ ಜೋಶಿ ಮಾತನಾಡಿ, ಸಮಾಜದಲ್ಲಿ ಜನರು ಕಣ್ಣಿಗೆ ಏನು ತೊಂದರೆಯಾಗುತ್ತಿದೆ ಎನ್ನುವದು ಗೊತ್ತಿರುವದಿಲ್ಲ. ಚಿಕಿತ್ಸೆ ಮಾಡಿಸುವ ಹಣಕಾಸಿನ ಸಮಸ್ಯೆ, ಹೆದರಿಕೆ, ದಿನಗೂಲಿ ಕಳೆದುಕೊಳ್ಳುವ ಭಯ ಇವುಗಳಿಂದ ಕಣ್ಣಿನ ಚಿಕಿತ್ಸೆ ಮಾಡಿಸಿಕೊಂಡಿರುವದಿಲ್ಲ. ಹೀಗಾಗಿ ಡಾ. ಎಂ.ಎಂ. ಜೋಶಿಯವರ ದೂರದೃಷ್ಟಿಯಿಂದ ತಾಲೂಕಿನಲ್ಲಿ ಒಂದು ದೃಷ್ಟಿ ಕೇಂದ್ರವನ್ನು ಸ್ಥಾಪಿಸುವ ಮೂಲಕ ಜನರಿಗೆ ಸುಲಭವಾಗಿ ನೇತ್ರದ ಚಿಕಿತ್ಸೆಗಳು ಒದಗಿಸುವ ಕಾರ್ಯವನ್ನು ಮಾಡಲಾಗುತ್ತಿದೆ.

ಸಂಸ್ಥೆಯಿಂದ ಈಗಾಗಲೇ ಸುಮಾರು 21 ದೃಷ್ಟಿಕೇಂದ್ರಗಳನ್ನು ತೆರೆಯಲಾಗಿದ್ದು, ಇದು 22ನೇ ಕೇಂದ್ರವಾಗಿದೆ. ಇಲ್ಲಿರುವ ಸಿಬ್ಬಂದಿಗಳು ತಾಲೂಕಿನ ಪ್ರತಿ ಮನೆಯನ್ನು ಸಂದರ್ಶಿಸಿ ಕಣ್ಣಿನ ಸಮಸ್ಯೆಗಳ ಕುರಿತು ತಿಳಿಹೇಳುವ ಕಾರ್ಯವನ್ನು ಮಾಡಲಾಗುತ್ತದೆ. ಇದಕ್ಕೆ ಯಾವುದೇ ಹಣ ಪಡೆಯುವದಿಲ್ಲ. ಇದೀಗ ಶಿಬಿರದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಉಚಿತವಾಗಿ ಶಸ್ತ್ರಚಿಕಿತ್ಸೆ ನೀಡಲಾಗುತ್ತಿದೆ. ದೃಷ್ಟಿ ಕೇಂದ್ರವನ್ನು ಜನರ ಉಪಯೋಗಕ್ಕಾಗಿ ತೆರೆಯಲಾಗಿದೆ. ಇದರಲ್ಲಿ ಯಾವುದೇ ದುಡ್ಡು ಮಾಡುವ ಉದ್ದೇಶವಿಲ್ಲ, ಅನಗತ್ಯ ಅಂಧತ್ವ ಮುಕ್ತ ಮಾಡುವ ಉದ್ದೇಶಕ್ಕೆ ಜನರ ಸಹಕಾರ ಅವಶ್ಯ ಎಂದರು.

ಕಾರ್ಯಕ್ರಮದಲ್ಲಿ ಉದ್ಯಮಿ ಮಹಾದೇವ ಕರಮರಿ, ಹುಬ್ಬಳ್ಳಿ ಆಯುರ್ವೇದ ಸೇವಾ ಸಮಿತಿ ಅಧ್ಯಕ್ಷ ಗೋವಿಂದ ಜೋಶಿ, ನಂದಕುಮಾರ ವೈ.ಎಸ್., ಶೇಷಗಿರಿ ಕುಲಕರ್ಣಿ, ಕುತ್ಬುದ್ದಿನ್ ಮುಲ್ಲಾ, ಡಾ. ಮಯೂರ ಕುಲಕರ್ಣಿ, ಡಾ. ಆಶೀಶ್ ಸಿಂಗ್, ಮಾರ್ಟಿನ್ ದಾಸರಿ, ಆಕಾಶ ನರವಟೆ, ಶ್ರೀನಿವಾಸ ಕುಲಕರ್ಣಿ, ವಾಣಿ ರಸಾಳಕರ ಸೇರಿದಂತೆ ಅನೇಕರಿದ್ದರು.

---

# ಶುಭ ತರಲಿ ಅಕ್ಷಯ ತೃತೀಯ




ಎಪ್ರಿಲ್ 30ರಂದು ಬಸವೇಶ್ವರ ಜಯಂತಿ ಮತ್ತು ಅಕ್ಷಯ ತೃತೀಯ ಶುಭದಿನ. ಶುಭಕಾರ್ಯಗಳಿಗೆ ಶುಭ ಹಾಡುವ ಶುಭದಿನ. ಅಕ್ಷಯ ತೃತೀಯ ಅಥವಾ ಅಕ್ಷಯ ತದಿಗೆಯನ್ನು ಸಡಗರದಿಂದ ಆಚರಿಸಲು ಚಿನ್ನದಂಗಡಿಗಳು ಶೃಂಗಾರಗೊಂಡಿವೆ.

ಅಕ್ಷಯ ತೃತೀಯ ಸಂದರ್ಭದಲ್ಲಿ ಗ್ರಾಹಕರು ಕೊಳ್ಳಲು ಮುಂದಾಗುವುದು ಸಾಮಾನ್ಯವಾಗಿ ಚಿನ್ನ, ಬೆಳ್ಳಿ ಹಾಗೂ ವಜ್ರದ ಆಭರಣಗಳು. ಮನೆಯಲ್ಲಿ ಚಿನ್ನದ ಆಭರಣದ ಪೆಟ್ಟಿಗೆ ತೆರೆದು ನೋಡಿದರೂ ಸಮಾಧಾನವಿಲ್ಲ. ಇನ್ನಷ್ಟು ಒಡವೆಗಳನ್ನು ಖರೀದಿಸುವ ಆಸೆ. ಪ್ರತಿ ವರ್ಷ ಅಕ್ಷಯ ತೃತೀಯದ ದಿನ ಖರೀದಿಸಿದ ಚಿನ್ನದ ಒಡವೆಗಳೆಲ್ಲ ರಾಶಿ ರಾಶಿಯಾಗಿ ಪೆಟ್ಟಿಗೆಯಲ್ಲಿವೆ. ಈ ವರ್ಷವೂ ಯಾವುದೋ ಒಂದು ಚಿನ್ನದ ಆಭರಣ ಖರೀದಿಸಿ ಆ ಪೆಟ್ಟಿಗೆಯಲ್ಲಿ ಸೇರಿಸಿಟ್ಟರೆ ಸಮಾಧಾನ!

ಅಕ್ಷಯ ತೃತೀಯದಂದು ಚಿನ್ನಾಭರಣ, ವಾಹನ ಹಾಗೂ ಬೆಲೆಬಾಳುವ ವಸ್ತುಗಳನ್ನು ಖರೀದಿಸಿದರೆ ಅದೃಷ್ಟ ದೊರೆಯುತ್ತದೆ, ಮತ್ತಷ್ಟು ಬೆಲೆಬಾಳುವ ವಸ್ತುಗಳನ್ನು ಖರೀದಿಸುವ ಯೋಗ ಬರುತ್ತದೆ, ಈ ದಿನದಂದು ಯಾವುದೇ ಶುಭಕಾರ್ಯಕ್ರಮ ಆರಂಭಿಸಿದರೂ ಅದರಲ್ಲಿ ಸಂಪೂರ್ಣ ಯಶಸ್ಸು ಸಿಗುತ್ತದೆ ಎಂದು ಜನರು ನಂಬುತ್ತಾರೆ. ಈ ದಿನ ಪೂಜೆ ಪುನಸ್ಕಾರಗಳು, ವ್ರತ, ದಾನ-ಧರ್ಮ ಮಾಡಿದರೆ ಪುಣ್ಯ ಲಭಿಸುತ್ತದೆ. ಅಕ್ಕ-ಪಕ್ಕದ ಮನೆಯವರಿಗೆ ಅರಿಶಿನ, ಕುಂಕಮ ತಾಂಬೂಲ ಕೊಡುತ್ತಾರೆ. ಗೋವಿಗೆ ಪೂಜೆ ಮಾಡಿ ಬಾಳೆ ಎಲೆಯಲ್ಲಿ ಸಿಹಿ ತಿನಿಸಿದರೆ ವಿವಾಹ ದೋಷಗಳು ಪರಿಹಾರವಾಗುವುದಾಗಿ ನಂಬಿಕೆ ಇದೆ.

ಹೀಗಾಗಿ ದಾನ ಧರ್ಮ ನೀಡುವ ಮೂಲಕ ಈ ಅಕ್ಷಯ ತೃತೀಯ ದಿನವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸುತ್ತಾರೆ. ಆಭರಣ ಕೊಳ್ಳುವಾಗ ಆಭರಣದ ಅಂಗಡಿಗಳಲ್ಲಿ ಹಾಲ್‌ಮಾರ್ಕ್ ಚಿನ್ನವನ್ನೇ ಖರೀದಿಸಿ, ಒಡವೆ ತೂಕದ ಎಲೆಕ್ಟ್ರಾನಿಕ್ ಯಂತ್ರದ ಬಗ್ಗೆ ನಿಗಾ ಇರಲಿ.



**– ವಿ.ಎಂ.ಎಸ್. ಗೋಪಿ.**
ಸಾಹಿತಿಗಳು, ಬೆಂಗಳೂರು.

---

## ಪಹಲ್ಗಾಮ್ ದಾಳಿ: ದೇಶದಲ್ಲಿ ಶೋಕಾಚರಣೆ ಇರುವಾಗ ಐಪಿಎಲ್ ಏಕೆ?

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿ ಬಗ್ಗೆ ಇಡೀ ದೇಶವೇ ಖಂಡನೆ ವ್ಯಕ್ತಪಡಿಸುತ್ತಿದೆ. ಅಷ್ಟೇ ಅಲ್ಲದೆ ದೇಶದಲ್ಲಿ ಶೋಕಾಚರಣೆ ನಡೆಯುತ್ತಿದೆ. ಆದ್ರೂ ಐಪಿಎಲ್ ನಡೆಯಲು ಬಿಟ್ಟಿದ್ದಾರೆ ಎಂದು ಎಐಸಿಸಿ ಅಥಾಅ ಸದಸ್ಯ ಬಿಕೆ ಹರಿಪ್ರಸಾದ್ ಹೇಳಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ದಾಳಿಯಿಂದ 26 ಭಾರತೀಯರು ಮೃತಪಟ್ಟ ಹಿನ್ನೆಲೆಯಲ್ಲಿ ದೇಶದಲ್ಲಿ ಶೋಕಾಚರಣೆ ನಡೆಯುತ್ತಿದೆ.

---

# ಮೇ.1ಕ್ಕೆ ಪಪ್ಪಿ ಸಿನಿಮಾ ಬಿಡುಗಡೆ




■ **ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಸದ್ದು ಮಾಡುತ್ತಿರುವ ಕನ್ನಡ ಸಿನಿಮಾ ಪಪ್ಪಿ ಮೇ.1ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ ಎಂದು ಚಿತ್ರದ ನಿರ್ದೇಶಕ ಆಯುಷ್ ಮಲ್ಲಿ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇಡೀ ಸಿನಿಮಾ ಉತ್ತರ ಕರ್ನಾಟಕ ಭಾಷೆಯ ಸೊಗಡಿನಲ್ಲೇ ಮೂಡಿಬಂದಿದೆ. ಅದರಲ್ಲೂ ತಿರುಳ್ಗನ್ನಡ ನಾಡು ಎನಿಸಿರುವ ಕೊಪ್ಪಳದ ಭಾಷೆಯನ್ನೇ ಬಳಸಿರುವುದು ವಿಶೇಷ. ಬಿ ಬಿ ಸಂಕನೂರ್ ಅವರ ಬ್ಯಾನರ್ ನ ಅಡಿಯಲ್ಲಿ, ನಮ್ಮ ಗಜೇಂದ್ರಗಡದ ಅಂದಪ್ಪ ಸಂಕಾನೂರ್ ಅವ್ರು ನಿರ್ಮಾಣದಲ್ಲಿ ಮೂಡಿಬಂದಿರುವ "ಪಪ್ಪಿ" ಚಿತ್ರ ಇದೇ ಮೇ 1ರಂದು ರಾಜ್ಯದ್ಯಂತ ಸುಮಾರು 75 ಚಿತ್ರ ಮಂದಿರಗಳಲ್ಲಿ ತೆರೆ ಕಾಣಲಿದೆ ಎಂದರು.

ಈ ಚಿತ್ರಕ್ಕೆ ಖ್ಯಾತ ಛಾಯಾಗ್ರಾಹಕ ಸುರೇಶ್ ಬಾಬು ರವರ ಕ್ಯಾಮೆರಾ ಕೈಚಳಕವಿದ್ದು, ಎನ್ ಎಂ ವಿಶ್ವ ದೋಣಿ ಅವರ ಸಂಕಲನ, ಶ್ರೀಧರ್ ಕಶ್ಯಪ್ ರವರ ಸಂಗೀತ, ಹಾಗೂ ಕಮಲ್ ಗೋಯೆಲ್ ರವರು ಈ ಚಿತ್ರದ ಗ್ರೇಡಿಂಗ್ ಕೆಲಸವನ್ನು ಮಾಡಿದ್ದಾರೆ, ಸಿನಿಮಾದಲ್ಲಿ ಬಾಲ ನಟರಾದ ಹಾಲವರ್ತಿಯ ಜಗದೀಶ್ ಹಾಗೂ ಸಿಂಧನೂರಿನ ಆದಿತ್ಯ ಮುಖ್ಯ ಪಾತ್ರದಲ್ಲಿ ಅಭಿನಯಿಸಿದ್ದಾರೆ, ಇನ್ನು ಕೊಪ್ಪಳದ ದುರುಗಪ್ಪ ಕಾಂಬ್ಳಿ ಹಾಗೂ ರೇಣುಕಾ ದೇಸಾಯಿ ರವರು ಕೂಡ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ ಎಂದು ವಿವರಿಸಿದರು.

ಇಬ್ಬರು ಬಾಲಕರು ಹಾಗೂ ಸಣ್ಣ ಶ್ವಾನವೊಂದರ ಸುತ್ತ ಸಾಗುವ ಕತೆಯಾಗಿದ್ದು. ಈ ಚಿತ್ರವನ್ನು ಈಗಾಗಲೇ ಧ್ರುವ ಸರ್ಜಾರವರು ನೋಡಿ ಮೆಚ್ಚುವುದಲ್ಲದೆ, ಅವರೇ ಅರ್ಪಿಸುತ್ತಿರುವುದು ತುಂಬ ವಿಶೇಷ. ಕೆ ಆರ್ ಜಿ ಸಂಸ್ಥೆಯು ಈ ಚಿತ್ರವನ್ನು ವಿತರಿಸುತ್ತಿರುವುದು ನಮ್ಮ ಚಿತ್ರ ತಂಡಕ್ಕೆ ಒಂದು ಬಲ ಬಂದಂತಾಗಿದೆ, ಕುಟುಂಬ ಸಮೇತ ಸಿನಿಮಾ ನೋಡಿ, ಚಿತ್ರತಂಡವನ್ನು ಹರಸುವಂತೆ ಕೋರಿದರು. ಸುದ್ದಿಗೋಷ್ಠಿಯಲ್ಲಿ ಬಾಲನಟರಾದ ಜಗದೀಶ್, ಆದಿತ್ಯ ಇತರರಿದ್ದರು.

---

**ಬಸವ ಯೋಗ ಮಂದಿರದಲ್ಲಿ ಸಂಸ್ಕೃತಿ-ಸಂಸ್ಕಾರ ಶಿಬಿರ ಸಮಾರೋಪ**

# ಸಂಸ್ಕೃತಿ-ಸಂಸ್ಕಾರಗಳಿದ್ದರೆ ಯಶಸ್ಸು ಸಾಧ್ಯ

■ **ವಿಜಯಸಾಕ್ಷಿ ಸುದ್ದಿ, ಗದಗ**

ಒಂದು ದೇಶದ ಇಲ್ಲವೆ ಒಂದು ಜನಾಂಗದ ಸಹಜ ಪ್ರವೃತ್ತಿ, ಜೀವಿಸುವ ರೀತಿ-ನೀತಿಗಳೇ ಸಂಸ್ಕೃತಿಯಾಗಿವೆ. ಇವುಗಳ ಮನಃಪೂರ್ವಕ ಸಾಧನೆ ಸಂಸ್ಕಾರವಾಗಿದೆ. ಇವೆರಡೂ ಒಟ್ಟಾಗಿದ್ದರೆ ನಾವು ಸುಖದಿಂದಿರುತ್ತೇವೆ. ಇಂದಿನ ಮಕ್ಕಳಿಗೆ ನಾವು ನಮ್ಮ ಸಂಸ್ಕೃತಿ ಪರಿಚಯಿಸಿ, ಅದರಂತೆ ನಡೆಯಲು ಅರಿವು ಮೂಡಿಸಬೇಕು ಎಂದು ನಿವೃತ್ತ ಶಿಕ್ಷಕ ಜಿ.ಪಿ. ಕಟ್ಟಿಮನಿ ತಿಳಿಸಿದರು.

ಇಲ್ಲಿನ ಎಸ್.ವಾಯ್.ಬಿ.ಎಂ.ಎಸ್. ಯೋಗ ಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2025 ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಬೇಸಿಗೆ ರಜೆ ನಿಮಿತ್ತ ಶಾಲಾ ಮಕ್ಕಳಿಗಾಗಿ ನಡೆಸಿದ 20ನೇ ಸಂಸ್ಕೃತಿ-ಸಂಸ್ಕಾರ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ವೇದಿಕೆಯಲ್ಲಿ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಮತ್ತು ಶಿಬಿರ ಸಂಯೋಜಕರಾದ ಕೆ.ಎಸ್. ಪಲ್ಲೇದ, ಶಿಬಿರದ ಶಿಕ್ಷಕರಾದ ಎಸ್.ಎಂ. ಬುರಡಿ, ಚೇತನ ಚುಂಚಾ, ಸುನಂದಾ ಜ್ಯಾನೋಪಂತರ ಉಪಸ್ಥಿತರಿದ್ದರು.

> ಮುಖ್ಯ ಅತಿಥಿಗಳಾಗಿ ಆಗಮಿಸಿದ ಯೋಗ ಸಾಧಕರಾದ ಪ್ರಮೋದ ಬೇಲಿ ಮಾತನಾಡಿ, ಶಿಬಿರಾರ್ಥಿಗಳು ನಿತ್ಯ ಯೋಗಾಭ್ಯಾಸ ಕ್ರಮ, ಭಾರತೀಯ ಕ್ರೀಡೆ, ಇನ್ನಿತರೆ ಸೃಜನಾತ್ಮಕ ಚಟುವಟಿಕೆಗಳನ್ನು ಕಲಿತದ್ದನ್ನು ನೋಡಿದರೆ ಭವಿಷ್ಯದಲ್ಲಿ ಇವರೆಲ್ಲ ಉತ್ತಮ ನಾಗರಿಕರಾಗಿ ಬೆಳೆಯುವವರೆಂಬ ಭರವಸೆ ಮೂಡಿದೆ. ಪಾಲಕರು ಮಕ್ಕಳನ್ನು ಪ್ರೋತ್ಸಾಹಿಸಿ ಬೆಳೆಸಬೇಕೆಂದು ಹೇಳಿದರು.

ಮಲ್ಲಿಕಾರ್ಜುನ ಮಳಗಿ ಯೋಗಾಸನ, ಶ್ರದ್ಧಾ ನಿರಂಜನ್ ಮತ್ತು ನಿಧಿ ಕಟ್ಟಿಮನಿ ನೃತ್ಯ ಪ್ರದರ್ಶಿದರು. ಹರ್ಷಿತಾ ಬೀಳಗಿ ಹಾಡು, ಅನ್ವಿತಾ ಗೌಡರ, ಋತಿಕಾ ಬೀಳಗಿ, ಕಾರ್ತಿಕ ಸೋಳಂಕಿ ವಚನ ಸಂಗೀತ ಹೇಳಿದರು. ಶ್ರೀಗಿರಿ ವರ್ಣೇಕರ ಸ್ಕೇಟಿಂಗ್ ಪ್ರದರ್ಶನ ನೀಡಿದರು. ವಿಜಯ ಬೇಲಿ, ಹೃತಿಕಾ ರೋಡಗೆ ಶಿಬಿರದ ಅನಿಸಿಕೆ ತಿಳಿಸಿದರು. ಶಿಬಿರಾರ್ಥಿಗಳೆಲ್ಲರಿಗೂ ಪ್ರಮಾಣ ಪತ್ರ ವಿತರಿಸಲಾಯಿತು.

ಶಿಬಿರಾರ್ಥಿಗಳಿಗೆ ಪೌಷ್ಠಿಕ ಆಹಾರ ಪರಿಚಯಿಸಲು ಮೊಳಕೆಯೊಡೆದ ಕಾಳುಗಳು, ಹಣ್ಣು ಹಂಪಲುಗಳ ಪ್ರಸಾದ ಸೇವೆಯನ್ನು ಗಿರಿಜಕ್ಕ ನಾಲತ್ವಾಡಮಠ, ಶಿವಾನಂದ ಗಿಡ್ಡಕೆಂಚಣ್ಣವರ, ಸತೀಶ ಜ್ಯಾನೋಪಂತರ, ವಿಜಯಲಕ್ಷ್ಮೀ ಆನೆಹೊಸೂರ, ಎಸ್.ಎಂ. ಬುರಡಿ, ನವೀನ ಪಲ್ಲೇದ, ಸುಶೃತ ಗುಡಗೂರ, ಹಿರಿಯರಾದ ಲಲಿತಾ ನಡಗಡ್ಡಿ ವಹಿಸಿಕೊಂಡಿದ್ದರು.

ಬಸವೇಶ್ವರ ಪ್ರಾಥಮಿಕ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಾದ ಎಸ್.ಎಂ. ಬುರಡಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಸಂಗೀತ ಶಿಕ್ಷಕಿ ಸುನಂದಾ ಜ್ಯಾನೋಪಂತರ ವಂದಿಸಿದರು.

## ಗದಗ ಜಿಲ್ಲೆಯನ್ನು ಸರ್ವಶ್ರೇಷ್ಠ ಜಿಲ್ಲೆಯಾಗಿಸೋಣ

▶▶ ಮೊದಲನೇ ಪುಟದಿಂದ

ಪರಿಶ್ರಮ, ಶ್ರದ್ಧೆ, ಕಠಿಣ ನಿರ್ಣಯಗಳ ಅಗತ್ಯವಿದೆ. ಸಂವಿಧಾನದ ಸರಿಯಾದ ಅನುಷ್ಠಾನದ ಮೂಲಕ ಗದಗ ಜಿಲ್ಲೆಯನ್ನು ಸರ್ವಶ್ರೇಷ್ಠ ಜಿಲ್ಲೆಯಾಗಿಸೋಣ ಎಂದು ಸಚಿವ ಎಚ್.ಕೆ .ಪಾಟೀಲ ಹೇಳಿದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಯಾವುದೇ ಸರ್ಕಾರ ಜನ ಮೆಚ್ಚುಗೆಗೆ ಪಾತ್ರವಾಗಬೇಕಾದರೆ ಅದು ರಾಜ್ಯ ಸರ್ಕಾರಿ ನೌಕರರಿಂದ ಮಾತ್ರ ಸಾಧ್ಯ. ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳನ್ನು ಜನರ ಮನೆಗೆ ತಲುಪಿಸುವವರು ಸರ್ಕಾರಿ ನೌಕರರು. ಅವರನ್ನು ಗೌರವಿಸುವ ಕಾಲ ಇಂದು ನಮಗೆಲ್ಲ ಒದಗಿ ಬಂದಿದೆ ಎಂದರಲ್ಲದೆ, ನೌಕರರ ನೆಮ್ಮದಿಯ ಬದುಕಿಗಾಗಿ ಒಪಿಎಸ್ ಯೋಜನೆ ಜಾರಿ ಮಾಡುವಂತೆ ಇದೇ ಸಂದರ್ಭದಲ್ಲಿ ಸಚಿವ ಎಚ್.ಕೆ. ಪಾಟೀಲರ ಮೂಲಕ ಸರ್ಕಾರಕ್ಕೆ ಒತ್ತಾಯಿಸುತ್ತೇನೆ ಎಂದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪ್ರಾಸ್ತಾವಿಕವಾಗಿ ಮಾತನಾಡಿ, ಹಳೇ ಬೇರು-ಹೊಸ ಚಿಗುರು ಎಂಬ ಪರಿಕಲ್ಪನೆಯಲ್ಲಿ ಇಂದಿನ ಕಾರ್ಯಕ್ರಮ ಆಯೋಜಿಸಿದೆ. ದ್ವಿತೀಯ ಪಿಯುಸಿಯಲ್ಲಿ ಜಿಲ್ಲೆ ಉತ್ತಮ ಅಂಕ ಗಳಿಸುವಲ್ಲಿ ಶಿಕ್ಷಕರ ಪಾತ್ರ ಮರೆಯಲು ಸಾಧ್ಯವಿಲ್ಲ. ಅಬ್ಬಿಗೇರಿ ಅಟಲ್ ಬಿಹಾರಿ ಶಾಲೆ, ಮಲ್ಲಸಮುದ್ರ ಶಾಲೆಗಳಲ್ಲಿ ಶೇ.100ರಷ್ಟು ಮಕ್ಕಳು ಉತ್ತೀರ್ಣರಾಗುವ ಮೂಲಕ ಸಾಧನೆ ಮೆರೆದಿದ್ದಾರೆ. ಈ ಸಾಧನೆಯಲ್ಲಿ ಪೋಷಕರ ಪರಿಶ್ರಮವೂ ಇದೆ ಎಂದರು. ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಮಾಡಲಾಯಿತು. ಪಿಯುಸಿಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಭರತ್ ಎಸ್. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ರವಿ ಗುಂಜೀಕರ, ಡಿಡಿಪಿಯು ಸೇರಿದಂತೆ ಗಣ್ಯರು ಹಾಜರಿದ್ದರು.

### ಗುಳೇ ತಪ್ಪಿಸಲು ತಾಲೂಕು ಪಂಚಾಯಿತಿ ದಿಟ್ಟ ಹೆಜ್ಜೆ : ಚಂದ್ರಶೇಖರ ಬಿ.ಕಂದಕೂರ

## ತಾಲೂಕಿನ್ಯಾದಂತ 'ದುಡಿಯೋಣ ಬಾ' ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ರೋಣ

ಬೇಸಿಗೆ ಅವಧಿಯಲ್ಲಿ ಗ್ರಾಮೀಣ ಭಾಗದ ಜನರು ಉದ್ಯೋಗ ಅರಸಿಕೊಂಡು ವಲಸೆ ಹೋಗುವುದನ್ನು ತಪ್ಪಿಸಲು ಗ್ರಾಮೀಣಾಭಿವೃದ್ಧಿ-ಪಂಚಾಯತ್ ರಾಜ್ ಇಲಾಖೆ ಹಾಗೂ ಗದಗ ಜಿಲ್ಲಾ ಪಂಚಾಯಿತಿ ಮೇ 1ರಿಂದ ಒಂದು ತಿಂಗಳ ಕಾಲ (ನರೇಗಾ) ಯೋಜನೆಯಡಿ 'ದುಡಿಯೋಣ ಬಾ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಇದನ್ನು ರೋಣ ತಾಲೂಕಿನಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬೇಕೆಂದು ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ತಿಳಿಸಿದರು.



ತಾಲೂಕು ಸಭಾ ಭವನದಲ್ಲಿ ಗ್ರೂಪ್ ಟಾಕ್ ಮೂಲಕ ಮಾತನಾಡಿದ ಅವರು, ತಾಲೂಕಿನ 22 ಗ್ರಾಮ ಪಂಚಾಯಿತಿಗಳಲ್ಲಿ ಈ ಅಭಿಯಾನವನ್ನು ಹಮ್ಮಿಕೊಳ್ಳಲು ಪಂಚಾಯಿತಿ ವತಿಯಿಂದ ಸಿದ್ಧತೆ ಮಾಡಿಕೊಳ್ಳಿ.

ಇದರಿಂದ ಬೇಸಿಗೆ ಅವಧಿಯಲ್ಲಿ ನಿರಂತರವಾಗಿ ಕೆಲಸ ಒದಗಿಸುವುದು, ಯೋಜನೆಯಿಂದ ಹೊರಗುಳಿದ ದುರ್ಬಲ ಕುಟುಂಬಗಳನ್ನು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡುವುದು, ಗ್ರಾಮೀಣ ಸ್ಥಳೀಯರಿಗೆ ಉದ್ಯೋಗ ನೀಡುವ ಮೂಲಕ ಸ್ವಾವಲಂಬಿ ಬದುಕು ಸಾಗಿಸುವಂತೆ ಮಾಡುವುದು 'ದುಡಿಯೋಣ ಬಾ' ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ದುಡಿಯೋಣ ಬಾ ಅಭಿಯಾನದ ಕುರಿತು ಐಇಸಿ ಚಟುವಟಿಕೆಗಳ ಮೂಲಕ ಜಾಗೃತಿ ಕಾರ್ಯಕ್ರಮ ನಡೆಯಲಿದ್ದು, ಉದ್ಯೋಗ ಚೀಟಿ ಹೊಂದಿರದ ಕುಟುಂಬಗಳಿಂದ ಉದ್ಯೋಗ ಚೀಟಿಗಾಗಿ ಅರ್ಜಿ ಹಾಗೂ ಅಗತ್ಯ ದಾಖಲೆಗಳನ್ನು ಪಡೆಯಬೇಕು.

ನಿರುದ್ಯೋಗ, ಆರ್ಥಿಕ ಸಂಕಷ್ಟ ಮತ್ತು ಬೆಲೆ ಏರಿಕೆಯಿಂದ ತತ್ತರಿಸಿರುವ ಜನರಿಗೆ ಈ ಅಭಿಯಾನ ಆಶಾದಾಯಕವಾಗಿದೆ. ಜೊತೆಗೆ ಗ್ರಾಮೀಣ ಪ್ರದೇಶದ ಅಕುಶಲ ಕರ್ಮಿಗಳಿಗೆ ಬೇಸಿಗೆಯಲ್ಲಿ ನಿರಂತರ ಉದ್ಯೋಗ ಒದಗಿಸುವ ಉದ್ದೇಶದಿಂದ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ನರೇಗಾ ಕೂಲಿ ದರವನ್ನು ಎಪ್ರಿಲ್ 1ರಿಂದ 370 ರೂ.ಗೆ ಹೆಚ್ಚಳ ಮಾಡಲಾಗಿದೆ. ಪ್ರತಿ ಕುಟುಂಬಕ್ಕೆ 100 ದಿನಗಳ ಉದ್ಯೋಗ ಪಡೆಯಲು ಅವಕಾಶವಿದ್ದು, ಬೇಸಿಗೆ ಅವಧಿಯಲ್ಲಿ 60 ದಿನಗಳ ಕೆಲಸ ನಿರ್ವಹಿಸಿದಲ್ಲಿ 22,200 ರೂ ರೈತರ ಖಾತೆಗೆ ಜಮಾ ಆಗಲಿದೆ. ರೈತರು ತಮ್ಮ ಜಮೀನುಗಳಲ್ಲಿ



ಬದು, ಕೃಷಿ ಹೊಂಡ, ತೆರೆದ ಬಾವಿ, ಮಾಡಲು ಅವಕಾಶ ಕಲ್ಪಿಸಲಾಗಿದೆ. ಸಮಗ್ರ ಕೆರೆ ಅಭಿವೃದ್ಧಿ ಕಾರ್ಯಕ್ರಮದಡಿ ಕಾಲುವೆಗಳ ಪುನಶ್ಚೇತನ, ಕೆರೆಗಳ ಹೂಳು ತೆಗೆಯುವುದು, ಕೆರೆ ಏರಿ ಮತ್ತು ಕೋಡಿ ದುರಸ್ತಿ, ಕೆರೆ ಅಂಚಿನಲ್ಲಿ ಅರಣ್ಯೀಕರಣ ಕಾಮಗಾರಿ ಕೈಗೊಳ್ಳಲು ಆದ್ಯತೆ ನೀಡಲಿದೆ. ರಸ್ತೆ ಬದಿ ನೆಡುತೋಪು, ಬ್ಲಾಕ್ ಪ್ಲಾಂಟೇಶನ್, ಕೃಷಿ ಅರಣ್ಯೀಕರಣ, ತೋಟಗಾರಿಕೆ ಬೆಳೆ ಬೆಳೆಯಲು ಕಾಮಗಾರಿ ನಿರ್ವಹಿಸಲು ಅವಕಾಶ ಕಲ್ಪಿಸಲಾಗಿದೆ ಎಂದರು.

ತಾಲೂಕಿನ ಎಲ್ಲಾ ಪಿಡಿಓಗಳು, ಡಿಇಓಗಳು, ಇಂಜಿನಿಯರ್, ಬಿಎಫ್‌ಟಿ, ಜಿಕೆಎಂ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

> ನರೇಗಾ ಯೋಜನೆಯಡಿಯಲ್ಲಿ ತಾಲೂಕಿನಲ್ಲಿ ಒಟ್ಟು 29,467 ಜಾಬ್ ಕಾರ್ಡ್‌ಗಳಿದ್ದು, ಅದರಲ್ಲಿ 22,320 ಸಕ್ರಿಯವಾದ ಜಾಬ್ ಕಾರ್ಡ್‌ಗಳು ಇವೆ. ತಾಲೂಕಿನ ಒಟ್ಟು ಕೂಲಿ ಕಾರ್ಮಿಕರು 73,021. ಅದರಲ್ಲಿ ಸಕ್ರಿಯ ಕೂಲಿ ಕಾರ್ಮಿಕರು 48,523 ಜನ ಇದ್ದಾರೆ. ಸಕ್ರಿಯವಾಗಿ ಇರದೆ ಇರುವ ಕೂಲಿ ಕಾರ್ಮಿಕರನ್ನು ಕೆಲಸಕ್ಕೆ ತರುವ ಉದ್ದೇಶ ನಮ್ಮ ಮೇಲಿದೆ. ತಾಲೂಕಿನಲ್ಲಿ ಕೆಲಸ ನಿರ್ವಹಿಸುವ ಟಿಐಇಸಿ, ಜಿಕೆಎಂ, ಬಿಎಫ್‌ಟಿ, ಕಾಯಕ ಬಂಧು, ಮಹಿಳಾ ಸ್ವ-ಸಹಾಯ ಗುಂಪುಗಳ ಸದಸ್ಯರು ಮನೆ ಮನೆಗೆ ಭೇಟಿ ನೀಡಿ ಇವರನ್ನು ಕೆಲಸಕ್ಕೆ ತರುವ ಕೆಲಸ ಮಾಡಬೇಕಿದೆ. ಈ ನಿಟ್ಟಿನಲ್ಲಿ ಎಲ್ಲರೂ ಕಾರ್ಯ ನಿರ್ವಹಿಸಿ ಎಂದು ಚಂದ್ರಶೇಖರ ಬಿ. ಕಂದಕೂರ ತಿಳಿಸಿದರು.

## ಅನ್ಯ ರಾಜ್ಯದ ವ್ಯಾಪಾರಿಗಳನ್ನು ತೆರವುಗೊಳಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ತೋಂಟ-ದಾರ್ಯ ಮಠದ ಜಾತ್ರಾ ಮಹೋತ್ಸವದ ಹೆಸರಿನಲ್ಲಿ ನಗರ ಸಭೆಗೆ ಒಳಪಡುವ ಸಾರ್ವಜನಿಕ ರಸ್ತೆಯಲ್ಲಿ ತಾತ್ಕಾಲಿಕವಾಗಿ ಮಾರಾಟ ಮಳಿಗೆಯನ್ನು ನಿರ್ಮಾಣ ಮಾಡಿಕೊಂಡು ಅನ್ಯ ರಾಜ್ಯದ ವ್ಯಾಪಾರಿಗಳು ವ್ಯವಹಾರ ಮಾಡುತ್ತಿದ್ದು, ಸ್ಥಳೀಯರ ವ್ಯಾಪಾರ ಕಡಿಮೆಯಾಗಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ದಲಿತ ಮಿತ್ರ ಮೇಳದ ಅಧ್ಯಕ್ಷ ಕುಮಾರ ನಡಗೇರಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕಳೆದ ಬಾರಿಯ ಜಾತ್ರಾ ಮಹೋತ್ಸವದಂತೆ ಈ ಬಾರಿಯೂ ಮತ್ತೆ ಹೋರಾಟಕ್ಕೆ ಅವಕಾಶ ನೀಡದೆ ಶೀಘ್ರವೇ ಈ ಅಂಗಡಿಗಳನ್ನು ತೆರವುಗೊಳಿಸಲು ಆಗ್ರಹಿಸಿದರು.

ಈ ಸಂದರ್ಭದಲ್ಲಿ ದಲಿತ ಮಿತ್ರ ಮೇಳ ಉಪಾಧ್ಯಕ್ಷ ವೆಂಕಟೇಶ ದೊಡ್ಡಮನಿ, ಸದಸ್ಯರಾದ ರಮೇಶ ವಾಲ್ಮೀಕಿ, ಶಿವು ಬಂಗಾರಿ, ರಾಘವೇಂದ್ರ ಸೊರಟೂರ, ಸಾಗರ ಹುಯಿಲಗೋಳ ಉಪಸ್ಥಿತರಿದರು.

### ಇಂಡಿಯನ್ ಪೊಲಿಟಿಕಲ್ ಕಾಂಗ್ರೆಸ್ ಪಾರ್ಟಿ ವತಿಯಿಂದ ಸರ್ಕಾರದ ವೈಫಲ್ಯಗಳ ವಿರುದ್ಧ ಪ್ರತಿಭಟನೆ

## ದರ ಏರಿಕೆಯನ್ನು ನಿಯಂತ್ರಿಸಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇಂಡಿಯನ್ ಪೊಲಿಟಿಕಲ್ ಕಾಂಗ್ರೆಸ್ ಪಾರ್ಟಿ ವತಿಯಿಂದ ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ವೈಫಲ್ಯಗಳ ವಿರುದ್ಧ ಪ್ರತಿಭಟನೆಯನ್ನು ಕೈಗೊಂಡರು.

ಪ್ರತಿಭಟನೆಯನ್ನುದ್ದೇಶಿಸಿ ಪಾರ್ಟಿಯ ರಾಷ್ಟ್ರೀಯ ಅಧ್ಯಕ್ಷ ಇ. ಆನಂದ್ ಮಾತನಾಡಿ, ರಾಜ್ಯದಲ್ಲಿ ಬೆಲೆ ಏರಿಕೆಯು ಜನ ಸಾಮಾನ್ಯರ ಬದುಕನ್ನು ದುಸ್ತರಗೊಳಿಸಿದೆ. ಅಗತ್ಯ ವಸ್ತುಗಳ ದರಗಳು ಗಗನಕ್ಕೇರುತ್ತಿದ್ದು, ಇದರಿಂದ ಬಡವರು, ಮಧ್ಯಮ ವರ್ಗದವರು ತೀವ್ರ ಸಂಕಟಕ್ಕೆ ಗುರಿಯಾಗಿದ್ದಾರೆ ಎಂದರು.

ರಾಷ್ಟ್ರೀಯ ಮಹಿಳಾ ವಿಭಾಗದ ಅಧ್ಯಕ್ಷೆ ಉಮಾ ವಿ ಮಾತನಾಡಿ, ಬೆಲೆ ಏರಿಕೆಯ ಬಗ್ಗೆ ಸರ್ಕಾರ ಸೂಕ್ತ ಗಮನ ಹರಿಸದ ಕಾರಣ



> ರಾಜ್ಯಾಧ್ಯಕ್ಷ ಎಸ್.ಎಸ್. ರೆಡ್ಡೇರ ಮಾತನಾಡಿ, ಸರ್ಕಾರಗಳು ಕೂಡಲೇ ಈ ಬೆಲೆ ಏರಿಕೆಗೆ ಕಡಿವಾಣ ಹಾಕಲು ಕ್ರಮವಹಿಸದೇ ಹೋದರೆ ರಾಜ್ಯದ ಎಲ್ಲಾ ಹಂತದ ಆರ್ಥಿಕ ಅಭಿವೃದ್ಧಿಗೆ ಹೊಡೆತ ಬೀಳುತ್ತದೆ. ಇದರಿಂದ ಉತ್ಪನ್ನ ಸಂಸ್ಥೆಗಳು ಮುಚ್ಚುತ್ತದೆ, ಜನರಿಗೆ ಉದ್ಯೋಗ ಇಲ್ಲದೆ ಬೀದಿಗೆ ಬೀಳುವ ಪರಿಸ್ಥಿತಿ ಬರುತ್ತದೆ.
>
> ಕೇಂದ್ರ ಮತ್ತು ರಾಜ್ಯ ಸರ್ಕಾರ ಈ ಕೂಡಲೇ ಏರುತ್ತಿರುವ ವಿದ್ಯುತ್, ನೀರು, ಹಾಲು, ಅಡುಗೆ ಅನಿಲ, ಪೆಟ್ರೋಲ್, ಪ್ರಯಾಣ ದರ ಇತ್ಯಾದಿಗಳನ್ನು ನಿಯಂತ್ರಿಸಬೇಕು ಮತ್ತು ಇಳಿಕೆ ಮಾಡಬೇಕೆಂದು ಒತ್ತಾಯಿಸಿದರು.

ಜನರಲ್ಲಿ ಈಗ ಆಕ್ರೋಶ ಹೆಚ್ಚಾಗಿದೆ. ಬೆಲೆ ಏರಿಕೆಗೆ ಕಡಿವಾಣ ಹಾಕದೇ, ಕಾಂಗ್ರೆಸ್ ಸರ್ಕಾರ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುತ್ತಿದೆ. ವಿರೋಧ ಪಕ್ಷ ಬಿಜೆಪಿ ಸಹ ರಾಜ್ಯ ಸರ್ಕಾರದ ವಿರುದ್ಧ ಮುಷ್ಕರ ಮಾಡುತ್ತಾ ಜನರ ಗಮನವನ್ನು ಬೇರೆಡೆ ಸೆಳೆದು ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ ಎಂದರು.

ಈ ಪ್ರತಿಭಟನೆಯಲ್ಲಿ ರಾಷ್ಟ್ರೀಯ ಕಾರ್ಮಿಕ ವಿಭಾಗದ ಅಧ್ಯಕ್ಷ ಶಿವಾಜಿರಾವ್, ರಾಜ್ಯ ಮಹಿಳಾ ಅಧ್ಯಕ್ಷತೆ ಪದ್ಮಾವತಿ, ಓ.ಬಿ.ಸಿ ರಾಜ್ಯಾಧ್ಯಕ್ಷ ಚಂದ್ರಶೇಖರ್, ರಾಜ್ಯ ಎಸ್.ಸಿ-ಎಸ್.ಟಿ ವಿಭಾಗದ ಅಧ್ಯಕ್ಷ ಶಿವಶಂಕರ್, ಮಹಿಳಾ ಮುಖಂಡರಾದ ಶಾರದ, ಶೋಭ, ಅನುರಾಧ, ವಿಜಯಲಕ್ಷ್ಮೀ, ಶಾಂತಮ್ಮ ಸೇರಿದಂತೆ ರಾಜ್ಯದ ವಿವಿದ ಭಾಗಗಳಿಂದ ಆಗಮಿಸಿದ ಇಂಡಿಯನ್ ಪೊಲಿಟಿಕಲ್ ಪಕ್ಷದ ಮುಖಂಡರು, ಕಾರ್ಯಕರ್ತರು, ಮಹಿಳೆಯರು ಭಾಗವಹಿಸಿದ್ದರು.

### ಶ್ರೀ ಏಳು ಮಕ್ಕಳ ತಾಯಿ ದೇವಸ್ಥಾನದ ಧರ್ಮ ಸಭೆಯಲ್ಲಿ ಶ್ರೀ ಗುರುಸಿದ್ಧ ರಾಜಯೋಗಿಂದ್ರ ಮಹಾಸ್ವಾಮಿಗಳು

## ಸಣ್ಣ ಸಮಾಜ ಎಂದು ಕೀಳರಿಮೆ ಬೇಡ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಏಳು ಮಕ್ಕಳ ತಾಯಿ ದೇವಸ್ಥಾನದ ನೂತನ ಗೋಪುರದ ಕಳಸಾರೋಹಣ, ಹಾಗೂ ದೇವಸ್ಥಾನದ ಜಾತ್ರಾ ಮಹೋತ್ಸವ ಮತ್ತು ಶ್ರೀ ಡೋಹರ್ ಕಕ್ಕಯ್ಯನವರ ಜಯಂತ್ಯುತ್ಸವದ ಕಾರ್ಯಕ್ರಮದ ಎರಡನೇ ದಿನವಾದ ಮಂಗಳವಾರ ವಿಶೇಷ ಪೂಜೆ, ಅಲಂಕಾರಗಳು ಸಂಪ್ರದಾಯದಂತೆ ನೆರವೇರಿದವು.

ನಂತರ ನಡೆದ ಧರ್ಮ ಸಭೆಯಲ್ಲಿ ಹುಬ್ಬಳ್ಳಿ ಮೂರುಸಾವಿರ ಮಠದ ಡಾ. ಶ್ರೀ ಗುರುಸಿದ್ದ ರಾಜಯೋಗಿಂದ್ರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಡೋಹರ ಕಕ್ಕಯ್ಯನವರು ಭಕ್ತಿ ಶ್ರೇಷ್ಠತೆಯನ್ನು ಮೆರೆದಿದ್ದರು. ಕಲ್ಯಾಣದ ಕ್ರಾಂತಿಯಾದಾಗ ವಚನ ಸಾಹಿತ್ಯ ಸಂರಕ್ಷಣೆ ಮಾಡುವ ಹೊಣೆಗಾರಿಕೆಯನ್ನು ಹೊತ್ತು ಚನ್ನಬಸವಣ್ಣನವರ ನೇತೃತ್ವದಲ್ಲಿ ಸಾವಿರಾರು



ಶರಣರು ವಚನ ಸಾಹಿತ್ಯವನ್ನು ಹೊತ್ತು ಬಿಜ್ಜಳನ ಸೈನ್ಯವನ್ನು ತಪ್ಪಿಸಿಕೊಳ್ಳುವ ಸಲುವಾಗಿ ಬರುವ ಸುಮಾರು ಮೂರು ಸಾವಿರ ಶರಣರು ಉತ್ತರದಿಂದ ದಕ್ಷಿಣದ ಕಡೆಗೆ ಬರುವಾಗ ಹುಬ್ಬಳ್ಳಿ ಮಠಕ್ಕೆ ಬರುತ್ತಾರೆ. ಇವರಲ್ಲಿ ಶರಣ ಕಕ್ಕಯ್ಯನವರು ಪ್ರಮುಖರಾಗಿದ್ದರು.

3 ಸಾವಿರ ಶರಣರು ಮಠಕ್ಕೆ ಬಂದು ಹೋಗಿದ್ದರಿಂದ ಮೂರುಸಾವಿರ ಮಠ ಎಂದು ಹೆಸರು ಇಡಲಾಯಿತು. ಸಣ್ಣ ಸಮಾಜ ಎಂದು ಕೀಳರಿಮೆ ಬೇಡ. ಸಂಸ್ಕಾರ, ಭಕ್ತಿಯಿಂದ ಉನ್ನತ ಸ್ಥಾನದಲ್ಲಿದ್ದಿರಿ, ಸಮಾಜಕ್ಕೆ ಒಳ್ಳೆಯ ವಿಚಾರ ಮಾಡಿ, ಮಕ್ಕಳಿಗೆ ಉತ್ತಮ ವಿಚಾರ, ಸಂಸ್ಕಾರ, ಶಿಕ್ಷಣ ದೊರಕಿಸಿ ಎಂದು ಸಲಹೆ ನೀಡಿದರು. ಶ್ರೀ ಏಳು ಮಕ್ಕಳ ತಾಯಿ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಪೂರ್ಣಾಜಿ ಖರಾಟೆ ಅಧ್ಯಕ್ಷತೆ ವಹಿಸಿದ್ದರು. ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ವಿಠ್ಠಲ್ ಪೊಳ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಪೂಜಾ ಖರಾಟೆ, ನಾಗೇಂದ್ರಪ್ಪ ಖರಾಟೆ, ಫಕ್ಕೀರಪ್ಪ ನಾರಾಯಣಕರ, ಓಂಕಾರೆಪ್ಪ ಗಜಾಕೋಶ, ವಾಸಪ್ಪ ಗಜಾಕೋಶ, ತಿಪ್ಪಣ್ಣ ಖರಾಟೆ, ಘಂಟೆಪ್ಪ ಗಜಾಕೋಶ, ಪ್ರಭು ನಾರಾಯಣಕರ, ಮೋಹನ ಗಜಾಕೋಶ, ಪರಮಾನಂದ ಘೋಡ್ಕೆ ಮುಂತಾದವರಿದ್ದರು. ಬಸವರಾಜ ಖರಾಟೆ, ನಿಖಿತಾ ಶೇರಖಾನೆ, ರಾಜು ಖರಾಟೆ, ಸತೀಶ ನಾರಾಯಣಕರ ನಿರ್ವಹಿಸಿದರು.

> ಬೀರವಳ್ಳಿ ಗುರುದೇವ ತಪೋವನಪೀಠಾಧ್ಯಕ್ಷರಾದ ಗುರು ಮಾತಾಜಿ ನಂದಾತಾಯಿ ಮಾತನಾಡಿ, ಸಮಾಜ ಯಾವುದೇ ಆದರೂ ಅದಕ್ಕೆ ತನ್ನದೇ ಆದ ಸಂಸ್ಕೃತಿ-ಸಂಪ್ರದಾಯ ಇರುತ್ತದೆ. ಡೋಹರ ಕಕ್ಕಯ್ಯನವರು ಪ್ರಮುಖರಾಗಿದ್ದು, ತಮ್ಮ ಭಕ್ತಿ ನಿಷ್ಠೆಯಿಂದ ಸಮಾಜಕ್ಕೆ ವಿಶೇಷ ಕೊಡುಗೆ ನೀಡಿದ್ದಾರೆ. ಅವರನ್ನು ಸ್ಮರಿಸುವ ಕಾರ್ಯ ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

## ಪಹಲ್ಗಾಮ್ ದಾಳಿಗೆ ಖಂಡನೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಅಮಾನುಷ ದಾಳಿಯನ್ನು ನರೇಗಲ್ಲದ ವಿವಿಧ ಸಂಘಟನೆಗಳು ಬಲವಾಗಿ ಖಂಡಿಸಿವೆ. ನರೇಗಲ್ಲ ಪಟ್ಟಣ ಅಭಿವೃದ್ಧಿ ಸಮಿತಿಯ ಆಶ್ರಯದಲ್ಲಿ ನಡೆದ ಪ್ರತಿಭಟನೆಯಲ್ಲಿ ಪಟ್ಟಣದ ಸಂತೆ ಬಜಾರದಲ್ಲಿನ ಗಣೇಶ ದೇವಸ್ಥಾನದಿಂದ ಬಸ್ ನಿಲ್ದಾಣದವರೆಗೆ ಘೋಷಣೆಗಳನ್ನು ಕೂಗುತ್ತ ಮೆರವಣಿಗೆ ನಡೆಸಲಾಯಿತು. ನಂತರ ಬಸ್‌ನಿಲ್ದಾಣದ ಬಳಿ ಮಾನವ ಸರಪಳಿ ನಿರ್ಮಿಸಿ, ಉಗ್ರರ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು.

ಈ ಸಂದರ್ಭದಲ್ಲಿ ಮಂಜುನಾಥ ಹೆಗಡೆ ಮಾತನಾಡಿ, ದೇಶದಲ್ಲಿ ಆಂತರಿಕ ಭದ್ರತೆ ಸಾಕಷ್ಟು ಬಿಗಿಯಾಗಿದೆ. ಆದರೂ ಉಗ್ರರು ನುಸುಳಿ ಪ್ರವಾಸಿಗರನ್ನು ಕೊಂದಿರುವುದು ಖೇದನೀಯ. ಈ ಉಗ್ರರಿಗೆ ಅತ್ಯುಗ್ರವಾದ ಶಿಕ್ಷೆ ನೀಡಿ ಸಂಹರಿಸಬೇಕಿದೆ ಎಂದರು.

ಪಟ್ಟಣ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವನಗೌಡ ಪಾಟೀಲ ಮಾತನಾಡಿ, ಇಂತಹ ಉಗ್ರ ಕೃತ್ಯಗಳಿಗೆ ಪಾಕಿಸ್ತಾನ ಯಾವಾಗಲೂ ಬೆಂಗಾವಲಾಗಿ ನಿಂತಿದೆ.

ಈ ಕೃತ್ಯದಲ್ಲಿ ಪಾಕಿಸ್ತಾನದ ಕೈವಾಡ ಇರುವುದು ಜಗಜ್ಜಾಹೀರಾಗಿದೆ. ಆದ್ದರಿಂದ ಪಾಕಿಸ್ತಾನಕ್ಕೂ ಸರಿಯಾದ ಪಾಠ ಕಲಿಸಬೇಕಾದ ಸಮಯ ಈಗ ಬಂದಿದೆ ಎಂದರು. ನಿವೃತ್ತ ಯೋಧ ಶಿವಪುತ್ರಪ್ಪ ಸಂಗನಾಳ ಮಾತನಾಡಿ, ಮೊದಲು ಕಾಶ್ಮೀರಿ ಜನರ ಮನಸ್ಥಿತಿ ಬದಲಾಗಬೇಕಿದೆ. ಉಗ್ರರನ್ನು ಬೆಂಬಲಿಸವುದನ್ನು ಅವರು ನಿಲ್ಲಿಸಬೇಕು.

ಅದಕ್ಕಾಗಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರ ಈಗಾಗಲೇ ಕಾರ್ಯೋನ್ಮುಖವಾಗಿದೆ. ಈ ಸಮಯದಲ್ಲಿ ಅವರನ್ನು ಬೆಂಬಲಿಸವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು.

ರೈತ ಸೇನೆಯ ಶರಣಪ್ಪ ಧರ್ಮಾಯತ ಮಾತನಾಡಿ, ಉಗ್ರರಿಗೆ ಮತ್ತು ಅವರಿಗೆ ಬೆಂಬಲ ನೀಡುತ್ತಿರುವ ಪಾಕಿಸ್ತಾನಕ್ಕೆ ಚುರುಕು ಮುಟ್ಟಿಸುವ ಕಾರ್ಯ ಮಾಡಬೇಕು. ಕೇಂದ್ರ ಸರಕಾರದ ಯಾವುದೇ ಕ್ರಮಕ್ಕೂ ದೇಶದ ಎಲ್ಲ ರೈತರ ಮತ್ತು ಸಾರ್ವಜನಿಕರ ಬೆಂಬಲ ಇದ್ದೇ ಇದೆ ಎಂದರು.

## ಕೃಷ್ಣ ಭೈರೇಗೌಡ ದಂಪತಿಗೆ ಮಹಾ ಮಾನವತಾವಾದಿ ಪ್ರಶಸ್ತಿ ಪ್ರದಾನ

▶▶ ಮೊದಲನೇ ಪುಟದಿಂದ

ಆ ಕಾರಣಕ್ಕಾಗಿ ನಾನು ಬಿಳಿ ಬಟ್ಟೆ ಖಾದಿ ಹಾಕಲ್ಲ. ಅದನ್ನು ಹಾಕುವ ಅರ್ಹತೆಯೂ ಇಲ್ಲ. ನನ್ನ ಸಾಮರ್ಥ್ಯಕ್ಕಿಂತ ಹೆಚ್ಚಾಗಿ ನನಗೆ ಅವಕಾಶ ಸಿಕ್ಕಿವೆ. ಪಕ್ಷ, ಕ್ಷೇತ್ರದ ಜನರು ನನಗೆ ಅವಕಾಶ ಕೊಟ್ಟಿದ್ದಾರೆ. ಆ ಕಾರಣಕ್ಕಾಗಿ ನಾನು ಯಾವುದೇ ಪ್ರಶಸ್ತಿಗಳನ್ನು ಸ್ವೀಕರಿಸುವುದಿಲ್ಲ. ಆದರೆ ತೋಂಟದ ಸಿದ್ಧರಾಮ ಶ್ರೀಗಳ ಒತ್ತಾಯ, ಗದಗ ಜನರಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲದ ಕಾರಣಕ್ಕೆ ಈ ಪ್ರಶಸ್ತಿ ಸ್ವೀಕರಿಸಿದ್ದೇನೆ ಎಂದರು.

ಕಂದಾಯ ಸಚಿವ ಕೃಷ್ಣ ಭೈರೇಗೌಡ ಹಾಗೂ ಅವರ ಪತ್ನಿ ಮೀನಾಕ್ಷಿ ಅವರಿಗೆ ಮಹಾ ಮಾನವತಾವಾದಿ ಬಸವೇಶ್ವರ ಪ್ರಶಸ್ತಿಯನ್ನು ಗಾಂಧಿವಾದಿ, ನಾಡೋಜ ಪಿ. ಕೃಷ್ಣ ಪ್ರದಾನ ಮಾಡಿದರು. ಪ್ರಶಸ್ತಿ 1 ಲಕ್ಷ ರೂ. ಹಾಗೂ ಸ್ಮರಣಿಕೆ ಒಳಗೊಂಡಿದೆ.

ಜ.ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ, ವಿಜಯಪುರ ಷಣ್ಮುಖಾರೂಢ ಮಠದ ಅಭಿನವ ಸಿದ್ಧಾರೂಢ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಸಂಸದ ಐ.ಜಿ. ಸನದಿ, ಜಿಲ್ಲಾಧಿಕಾರಿ ಶ್ರೀಧರ್, ಲಿಂಬಯ್ಯಸ್ವಾಮಿ ಪ್ರತಿಷ್ಠಾನದ ಅಧ್ಯಕ್ಷ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ಹಾಗೂ ಪ್ರತಿಷ್ಠಾನದ ಪದಾಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ನಿಧನ

### ಬಾಳಪ್ಪ ಶಂಕರಪ್ಪ ಮ್ಯಾಗೇರಿ



**ನರೇಗಲ್ಲ:** ಸಮೀಪದ ಜಕ್ಕಲಿ ಗ್ರಾಮದ ನಿವಾಸಿ, ಬಯಲಾಟದ ಹಿರಿಯ ಕಲಾವಿದ ಬಾಳಪ್ಪ (ದೊಡ್ಡಮುದಿಯಪ್ಪ) ಶಂಕರಪ್ಪ ಮ್ಯಾಗೇರಿ (81) ಮಂಗಳವಾರ ನಿಧನರಾದರು.

ಮೃತರಿಗೆ ಪುತ್ರ, ಪುತ್ರಿ, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗದವರು ಇದ್ದಾರೆ.

## ಬುದ್ಧಿವಾದ ಹೇಳಿದ ಚಾಲಕ-ಕಂಡಕ್ಟರ್ ಮೇಲೆ ಹಲ್ಲೆ

■ ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ


ನಿಧಾನವಾಗಿ ಹೋಗಪ್ಪ ಎಂದು ಬುದ್ಧಿವಾದ ಹೇಳಿದ್ದಕ್ಕೆ ಎನ್ ಡಬ್ಲ್ಯೂ ಕೆಎಸ್ಆರ್ ಟಿಸಿ ಬಸ್ ಚಾಲಕ ಮತ್ತು ನಿರ್ವಾಹಕನಿಗೆ ಕಟ್ಟಿಗೆಯಿಂದ ಹೊಡೆದಿರುವ ಘಟನೆ ರಬಕವಿ-ಬನಹಟ್ಟಿ ತಾಲೂಕಿನ ಜಗದಾಳ ಗ್ರಾಮದಲ್ಲಿ ಜರುಗಿದೆ.

ಚಲಿಸುತ್ತಿದ್ದ ಸಾರಿಗೆ ಬಸ್ ಗೆ ಬೈಕ್ ಸವಾರ ಅಡ್ಡ ಬಂದಿದ್ದರು. ಆಗ, ಬಸ್ ಚಾಲಕ ನಿಧಾನವಾಗಿ ಹೋಗಪ್ಪ ಅಂತ ಬುದ್ದಿವಾದ ಹೇಳಿದ್ದಾರೆ. ಇಷ್ಟಕ್ಕೇ ಬಸ್ ಚಾಲಕನ ಜೊತೆ ಬೈಕ್ ಸವಾರ ವಾಗ್ವಾದಕ್ಕೆ ಇಳಿದಿದ್ದಾನೆ. ಚಾಲಕನಿಗೆ ನಿಂದಿಸಿ, ಬಳಿಕ ತನ್ನ ತಂದೆಗೆ ಕರೆ ಮಾಡಿದ್ದಾನೆ.

ಜಗದಾಳ ಬಳಿ ಬೊಲೆರೊ ವಾಹನದಲ್ಲಿ ಜನರನ್ನು ಕರೆತಂದು ಚಾಲಕ ಮತ್ತು ನಿರ್ವಾಹಕರ ಮೇಲೆ ಕಟ್ಟಿಗೆಯಿಂದ ಹಲ್ಲೆ ಮಾಡಿದ್ದಾರೆ. ಘಟನೆ ಸಂಬಂಧ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇರಾನ್, ಇರಾಕ್, ಇಂಡೋನೇಷ್ಯಾ, ಪಾಕಿಸ್ತಾನ, ಬಾಂಗ್ಲಾದೇಶ ಇವೆಲ್ಲವು ನಮ್ಮವು: ಪ್ರಮೋದ್ ಮುತಾಲಿಕ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಇರಾನ್, ಇರಾಕ್, ಇಂಡೋನೇಷ್ಯಾ, ಪಾಕಿಸ್ತಾನ, ಬಾಂಗ್ಲಾದೇಶ ಇವೆಲ್ಲವು ನಮ್ಮವು ಎಂದು ಶ್ರೀರಾಮಸೇನೆಯ ಮುಖಂಡ ಪ್ರಮೋದ್ ಮುತಾಲಿಕ್ ಹೇಳಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ದೇಶಕ್ಕೆ ಸ್ವಾತಂತ್ರ್ಯ ಬಂದು 78 ವರ್ಷ ಆದ್ರೂ ಹಿಂದೂ ಎಂಬ ವ್ಯಕ್ತಿಗೆ ಅಪಮಾನ, ಅಪ್ರಚಾರ ಆಗುತ್ತಲೇ ಇದೆ ಎಂದರು.

ನಮ್ಮ ಭೂಮಿಯಲ್ಲೇ ನಮಗೆ ಅವಮಾನ. ಇದಕ್ಕೆ ಕಾರಣ ನಾವೇ. ನಾವೇ ದುರ್ಬಲರು, ಅಸಂಘಟಿತವಾಗಿದ್ದೇವೆ, ಹೇಡಿಗಳಾಗಿದ್ದೇವೆ. ಧೈರ್ಯ, ಸ್ಥೈರ್ಯ ಬರಬೇಕು ಎಂದರು.

ಸ್ವಾತಂತ್ರ್ಯ ಮುಂಚೆ ಬ್ರಿಟಿಷರೇ ಭಾರತ ಬಿಟ್ಟು ಹೋಗಿ ಅನ್ನೋ ಘೋಷಣೆ ಇತ್ತು.

ಈಗ ಭಾರತ ಅಪಾಯದಲ್ಲಿದೆ.

ಹಿಂದೂ ಅಪಾಯದಲ್ಲಿದ್ದಾನೆ, ಹಿಂದೂ ಧರ್ಮ ಅಪಾಯದಲ್ಲಿದೆ ಅಂತ ಘೋಷಣೆಯೊಂದಿಗೆ ಜೀವಿಸಬೇಕಿದೆ. ದೇಶ, ಧರ್ಮ ಉಳಿಸಬೇಕಿದೆ. ಎಷ್ಟೋ ಧರ್ಮ ಅವಹೇಳನ, ಎಷ್ಟೋ ಭೂಮಿ ಕಳೆದುಕೊಂಡಿದ್ದೇವೆ. ಅವಲೋಕನ ಮಾಡಿಕೊಳ್ಳಬೇಕಿದೆ ಎಂದು ಮುತಾಲಿಕ್ ಬೇಸರ ವ್ಯಕ್ತಪಡಿಸಿದ್ದಾರೆ.

### ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಅವರಿಗೆ KSDMಈನಿಂದ ಅಭಿನಂದನೆ

# ಡಿಜಿಟಲ್ ಮಾಧ್ಯಮಕ್ಕೆ ಶಕ್ತಿ ತುಂಬಿದ ಸಿಎಂ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಡಿಜಿಟಲ್ ಮಾಧ್ಯಮಕ್ಕೆ ಜಾಹೀರಾತು ನೀಡಲು ರಾಜ್ಯದಲ್ಲಿ ಮೊದಲ ಬಾರಿಗೆ ಡಿಜಿಟಲ್ ಜಾಹೀರಾತು ನೀತಿ-2024 ಜಾರಿಗೊಳಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಶೀಘ್ರ ಬೆಂಗಳೂರಿನಲ್ಲಿ ವಿಶೇಷವಾದ ಡಿಜಿಟಲ್ ಮಾಧ್ಯಮ ಸಮ್ಮೇಳನವನ್ನು ಹಮ್ಮಿಕೊಂಡು ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಡಿಜಿಟಲ್ ಮಾಧ್ಯಮ ಪತ್ರಕರ್ತರನ್ನು ಆಹ್ವಾನಿಸುವ ಚಿಂತನೆಯಿದೆ ಎಂದು ಕರ್ನಾಟಕ ಸ್ಟೇಟ್ ಡಿಜಿಟಲ್ ಮೀಡಿಯಾ ಫೋರಂ (KSDMF)ರಾಜ್ಯಾಧ್ಯಕ್ಷರಾದ ಬಿ. ಸಮೀವುಲ್ಲಾ ಹೇಳಿದರು.

ಕೆಎಸ್‌ಡಿಎಂಎಫ್ ವತಿಯಿಂದ ನಗರದ ಪ್ರೆಸ್‌ಕ್ಲಬ್‌ನಲ್ಲಿ ಮಂಗಳವಾರ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಹಾಗೂ ವಾರ್ತಾ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರಿಗೆ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು.



ಡಿಜಿಟಲ್ ಮಾಧ್ಯಮ ನೀತಿಯಿಂದಾಗಿ ಬೇರೆ ಪತ್ರಿಕೆ, ಟಿವಿಯಂತೆ ಡಿಜಿಟಲ್ ಮಾಧ್ಯಮವು ಪತ್ರಿಕೋದ್ಯಮದ ಭಾಗವೆಂದು ಅಧಿಕೃತವಾಗಿದೆ. ದೇಶದಲ್ಲಿ ಡಿಜಿಟಲ್ ಪಾಲಿಸಿ ಕೆಲವು ರಾಜ್ಯಗಳಲ್ಲಿ ಇದೆಯಾದರೂ ನಮ್ಮ ರಾಜ್ಯದಲ್ಲಿ ಈ ನೀತಿ ಸಮಗ್ರವಾಗಿದ್ದು, ವೃತ್ತಿಪರವಾಗಿ ರಚನೆಯಾಗಿದೆ ಎಂದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಅವರು ರಾಜ್ಯದಲ್ಲಿ ಡಿಜಿಟಲ್ ನೀತಿಯನ್ನು ಜಾರಿಗೆ ತರುವಲ್ಲಿ ಮಹತ್ವದ ಕಾರ್ಯ ನಿರ್ವಹಿಸಿದ್ದಾರೆ. ಡಿಜಿಟಲ್ ಮಾಧ್ಯಮವು ಪರ್ಯಾಯ ಮಾಧ್ಯಮವಾಗಿ ನೈಜ ಪತ್ರಿಕೋದ್ಯಮ, ನಿಷ್ಪಕ್ಷಪಾತವಾಗಿ ಪ್ರಾಮುಖ್ಯತೆ ಪಡೆದುಕೊಂಡಿದೆ. ಈ ನಿಟ್ಟಿನಲ್ಲಿ ಕರ್ನಾಟಕ ಸ್ಟೇಟ್ ಡಿಜಿಟಲ್ ಮೀಡಿಯಾ ಫೋರಂ ತನ್ನ ಸಂಘಟಿತ ಪ್ರಯತ್ನದಿಂದಾಗಿ ರಾಜ್ಯದಲ್ಲಿ ಡಿಜಿಟಲ್ ಮಾಧ್ಯಮ-2024 ನೀತಿಯನ್ನು ಜಾರಿಗೆ ತರಲಾಗಿದೆ. ಈ ನೀತಿಯಲ್ಲಿ ಪತ್ರಕರ್ತರಿಗೆ ಪೂರಕವಾಗಿ ಕೆಲವೊಂದು ಅಗತ್ಯ ಬದಲಾವಣೆ, ತಿದ್ದುಪಡಿಯಾಗಬೇಕಿದೆ ಎಂದು ಹೇಳಿದರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಸನ್ಮಾನ ಸ್ವೀಕರಿಸಿ ಮಾತನಾಡಿ, ಸಂಸ್ಥೆಯ ಅಧ್ಯಕ್ಷರು ಹಾಗೂ ಹಿರಿಯ ಪತ್ರಕರ್ತರಾದ ಬಿ.ಸಮೀವುಲ್ಲಾ ಜೊತೆಗಿನ ವೃತ್ತಿ ಬಾಂಧವ್ಯವನ್ನು ಸ್ಮರಿಸಿದರು. ರಾಜ್ಯದಲ್ಲಿ ಡಿಜಿಟಲ್ ನೀತಿ ತರುವ ಬಗ್ಗೆ ಎರಡು ತಿಂಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆ ಚರ್ಚೆ ನಡೆಸಿದ್ದೆ. ಸಣ್ಣ ಪತ್ರಿಕೆಯಂತೆ ಡಿಜಿಟಲ್ ಮಾಧ್ಯಮವನ್ನು ಕೈಹಿಡಿಯುವ ಬಗ್ಗೆ ಮುಖ್ಯಮಂತ್ರಿ ಅವರ ಜೊತೆ ಮಾತನಾಡಿ ಡಿಜಿಟಲ್ ಮಾಧ್ಯಮ ಸಂಸ್ಥೆಗಳಿಗೂ ಜಾಹೀರಾತು ನೀಡಲು ಹಣಕಾಸು ವೆಚ್ಚ, ಡಿಜಿಟಲ್ ಮೀಡಿಯಾ ನೀತಿಯ ನೀಲನಕ್ಷೆ ಬಗ್ಗೆಯೂ ತಿಳಿಸಿದೆ. ಇದಕ್ಕೆ ಸಿಎಂ ಕೂಡ ಸಹಮತ ವ್ಯಕ್ತಪಡಿಸಿದರು. ಹೀಗಾಗಿ ಡಿಜಿಟಲ್ ಜಾಹೀರಾತು ನೀತಿ ತರಲು ಸಾಧ್ಯವಾಯಿತು ಎಂದರು. ಪ್ರೆಸ್ ಕ್ಲಬ್ ಅಧ್ಯಕ್ಷರಾದ ಶ್ರೀಧರ್ ಮಾತನಾಡಿ, ಡಿಜಿಟಲ್ ಮೀಡಿಯಾ ಫೋರಂ ಈಗಿನ ಡಿಜಿಟಲ್ ಮಾಧ್ಯಮಕ್ಕೆ ಅತ್ಯಗತ್ಯವಾಗಿತ್ತು. ವೃತ್ತಿಪರ ಡಿಜಿಟಲ್ ಪತ್ರಕರ್ತರಿಗೆ ಈ ಕೆಎಸ್‌ಡಿಎಂಎಫ್ ಫೋರಂ ಹೆಚ್ಚಿನ ಅನುಕೂಲವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕೆಎಸ್ ಡಿಎಂಎಫ್ ಉಪಾಧ್ಯಕ್ಷ ಸುನೀಲ್ ಶಿರಸಿಂಗಿ, ಕಾರ್ಯದರ್ಶಿ ಕೆ.ಎಂ. ಶಿವಕುಮಾರ್, ಖಜಾಂಚಿ ಸನತ್ ಕುಮಾರ್ ರೈ, ಜಂಟಿ ಕಾರ್ಯದರ್ಶಿಗಳಾದ ಮಾಲತೇಶ್ ಅರಸ್, ರಜನಿ ಹಾಗೂ ಕೆಎಸ್ ಡಿಎಂಎಫ್ ಸದಸ್ಯರು, ಹಿರಿಯ ಪತ್ರಕರ್ತರಾದ ಹಮೀದ್ ಪಾಳ್ಯ, ಪ್ರತಿಧ್ವನಿ ಶಿವಕುಮಾರ್, ವಿಜಯ್ ಭರಮಸಾಗರ, ಮಂಜು ಬಾಣಗೆರೆ, ರವೀಂದ್ರ ಜೋಶಿ, ಮುತ್ತುರಾಜ್, ರಮೇಶ್, ದರ್ಶನ್ ಮುಂತಾದವರು ಭಾಗವಹಿಸಿದ್ದರು.

**ಇಲಾಖೆಯಿಂದ ಐಡಿ ಕಾರ್ಡ್**

ಡಿಜಿಟಲ್ ಮಾಧ್ಯಮದವರಿಗೂ ವಾರ್ತಾ ಇಲಾಖೆಯಿಂದ ಮಾಧ್ಯಮ ಮಾನ್ಯತೆಯ ಕಾರ್ಡ್ ಅಥವಾ ಐಡಿ ಕಾರ್ಡ್ ನೀಡಲು ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರ ಜೊತೆ ಮಾತನಾಡುತ್ತೇನೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಭರವಸೆ ನೀಡಿದರು.


### ಪತ್ರಿಕಾಗೋಷ್ಠಿಯಲ್ಲಿ ನಿರ್ಮಾಪಕ ಆಯುಷ್ ಮಲ್ಲಿ ಮಾಹಿತಿ

# ಮೇ. 1ರಂದು ತೆರೆಗೆ ಬರಲಿದ್ದಾನೆ 'ಪಪ್ಪಿ'

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಭಾಷೆಯ ಸೊಗಡನ್ನು ಹೊಂದಿರುವ 'ಪಪ್ಪಿ' ಚಲನಚಿತ್ರವು ಇದೇ ಮೇ. 1ರಂದು ನಗರದ ಕೃಷ್ಣ ಟಾಕೀಸ್ ಸೇರಿದಂತೆ ರಾಜ್ಯಾದ್ಯಂತ ಚಿತ್ರ ಮಂದಿರಗಳಲ್ಲಿ ಬಿಡುಗಡೆಯಾಗಲಿದೆ ಎಂದು ಚಿತ್ರದ ನಿರ್ಮಾಪಕ ಆಯುಷ್ ಮಲ್ಲಿ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಚಿತ್ರದಲ್ಲಿ ಬಾಲನಟರಾದ ಕೊಪ್ಪಳ ಜಿಲ್ಲೆಯ ಹಾಲವರ್ತಿ ಗ್ರಾಮದ ಜಗದೀಶ, ಸಿಂದನೂರಿನ ಆದಿತ್ಯ ಸೇರಿದಂತೆ ರೇಣುಕಾ ದೇಸಾಯಿ, ದುರಗಪ್ಪ ಕಾಂಬಳೆ ಅವರುಗಳು ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಉತ್ತರ ಕರ್ನಾಟಕದ ಭಾಷೆಯ ಚಲನಚಿತ್ರವನ್ನು ಜಗತ್ತಿಗೆ ತೋರಿಸಬೇಕು ಮತ್ತು ಬೆಂಗಳೂರಿಗೆ ವಲಸೆ ಹೋಗಿ ಜೀವನ ನಡೆಸುವ ಕುಟುಂಬ ಮತ್ತು ಶ್ರೀಮಂತರ ಮನೆಯಲ್ಲಿ ಬೆಳೆದ ನಾಯಿಯ ಜೊತೆಗಿನ ಪ್ರೀತಿ-ವಾತ್ಸಲ್ಯದ ಜೀವನ ಹಂದರ ಹೊಂದಿರುವ ಚಿತ್ರ ಉತ್ತಮವಾಗಿ ಮೂಡಿ ಬಂದಿದೆ. ಖ್ಯಾತ ನಟರಾದ ಧ್ರುವ ಸರ್ಜಾ ಹಾಗೂ ರಮ್ಯಾ ಸೇರಿದಂತೆ ತೆಲುಗಿನ ರಾಣಾ ದಗಪಟಿ ಅವರು ಚಿತ್ರದ ಟ್ರೇಲರ್‌ನ್ನು ಪ್ರಶಂಸಿಸಿದ್ದಾರೆ ಎಂದರು.





ಈ ಚಿತ್ರವನ್ನು ಬೆಂಗಳೂರು, ಗದಗ ಹಾಗೂ ಹೊಸಪೇಟೆ ಸೇರಿದಂತೆ ವಿವಿಧ ಭಾಗಗಳಲ್ಲಿ ಚಿತ್ರೀಕರಣ ಮಾಡಲಾಗಿದೆ. ಉತ್ತರ ಕರ್ನಾಟಕದ ಕಲಾವಿದರಿಂದ ನಿರ್ಮಾಣವಾದ ಈ ಚಿತ್ರವನ್ನು ಎಲ್ಲರೂ ಪ್ರೋತ್ಸಾಹಿಸಿ ಬೆಂಬಲಿಸಬೇಕೆಂದು ನಿರ್ಮಾಪಕ ಆಯುಷ್ ಮಲ್ಲಿ ವಿನಂತಿಸಿದರು. ಇದೇ ಸಂದರ್ಭದಲ್ಲಿ ಬಾಲನಟರಾದ ಜಗದೀಶ ಮತ್ತು ಆದಿತ್ಯ ಮಾತನಾಡಿ, ರೀಲ್ಸ್‌ಗಳನ್ನು ಮಾಡುತ್ತಿದ್ದ ನಮಗೆ ಮೊದಲ ಬಾರಿಗೆ ಅವಕಾಶ ನೀಡಿ ನಮ್ಮ ಪ್ರತಿಭೆಯನ್ನು ಗುರುತಿಸಿದ 'ಪಪ್ಪಿ' ಚಿತ್ರತಂಡಕ್ಕೆ ಅಭಿನಂಧನೆಗಳು. ಎಲ್ಲರೂ ಚಿತ್ರಮಂದಿರಕ್ಕೆ ಆಗಮಿಸಿ ಚಿತ್ರವನ್ನು ನೋಡಿ ನಮಗೆ ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

# ಗದಗ ಜಿಲ್ಲಾ ಕ್ವಾರಿ ಕಾರ್ಮಿಕರ ಫೆಡರೇಶನ್‌ನಿಂದ ನಾಳೆ ಕಾರ್ಮಿಕರ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾ ಕ್ರೀಡಾಂಗಣ ಎದುರಿನ ರೋಟರಿ ಹಾಲ್‌ನಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವವರ ಕ್ವಾರಿ ಕಾರ್ಮಿಕರ ಫೆಡರೇಷನ್ ಗದಗ ಜಿಲ್ಲಾ ಸಮಿತಿ (ಆಲ್ ಇಂಡಿಯಾ ಟ್ರೇಡ್ ಯುನಿಯನ್ ಕಾಂಗ್ರೆಸ್) ವತಿಯಿಂದ ಮೇ 1ರಂದು ಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹರ್ಲಾಪೂರದ ಕೊಟ್ಟೂರೇಶ್ವರ ಮಠದ ಶ್ರೀ ಮ.ನಿ.ಪ್ರ. ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಎ.ಐ.ಟಿ.ಯು.ಸಿ. ಗದಗ ಜಿಲ್ಲಾ ಸಮಿತಿ ಅಧ್ಯಕ್ಷ ಕಾಂ. ಎಮ್.ಆಯ್. ನವಲೂರು ವಹಿಸುವರು. ಉದ್ಘಾಟನೆಯನ್ನು ಗದಗ ಜಿಲ್ಲಾ ಯೂಥ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಎಸ್.ಸೋದುನಕಟ್ಟಿ, ಕಾರ್ಮಿಕ ನಿರೀಕ್ಷಕ ಉಮೇಶ ಎಚ್. ಹುಲ್ಲಣ್ಣವರ, ಕೆ.ಟಿ.ಸಿ. ಟ್ರೇಡರ್ಸ್‌ನ ಜಗನ್ನಾಥ ಚ್ಯಾಗಿ, ಅತಿಥಿಗಳಾಗಿ ಜಾನಪದ ಕಲಾವಿದ ಗವಿಸಿದ್ದಯ್ಯ ಜ. ಹಳ್ಳಿಕೇರಿಮಠ ಜಂತ್ಲಿ-ಶಿರೂರ ಪಾಲ್ಗೊಳ್ಳುವರು.

ಮುಖ್ಯಮಂತ್ರಿ ಪದಕ ವಿಜೇತರಾದ ಪಿ.ಎಸ್.ಐ ಲಾಲಸಾಬ ಜೂಲಕಟ್ಟಿ, ರಾಜ್ಯ ಗುಪ್ತಚರ ಘಟಕದ ಸಿದ್ದರಡ್ಡಿ ಕಪ್ಪತ್ತನವರ, ಪ್ರವೀಣ ಕಲ್ಲೂರರನ್ನು ಸನ್ಮಾನಿಸಲಾಗುವುದು. ಎಲ್ಲ ಕಟ್ಟಡ ಕಾರ್ಮಿಕರು ತಮ್ಮ ಕೆಲಸಗಳನ್ನು ಸ್ಥಗಿತಗೊಳಿಸಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕಾರ್ಮಿಕ ಸಂಘಟನೆಯ ಮುಖಂಡರಾದ ಎಂ.ಐ. ನವಲೂರ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

# ಬಸವ ಜಯಂತಿ ಮೆರವಣಿಗೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು, ಜಗಜ್ಯೋತಿ, ಮಹಾಮಾನವತಾವಾದಿ, ಇಷ್ಟಲಿಂಗ ಜನಕ, ಲಿಂಗಾಯತ ಧರ್ಮ ಸಂಸ್ಥಾಪಕ ಬಸವಣ್ಣನವರ 920ನೇ ಜಯಂತಿ ಕಾರ್ಯಕ್ರಮದ ಮೆರವಣಿಗೆಗೆ ಬುಧವಾರ ಮುಂಜಾನೆ 9 ಗಂಟೆಗೆ ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರು ಚಾಲನೆ ನೀಡುವರು.

ವ್ಂರ್ವಣ್ಿಗ್ಂು್ುು ಶ್ರೀಮಠದಿಂದ ಪ್ರಾರಂಭವಾಗಿ ಮಹೇಂದ್ರಕರ ವೃತ್ತ, ಹುಯಿಲಗೋಳ ವೃತ್ತ, ಬಸವೇಶ್ವರ ವೃತ್ತ, ಕೆ.ಎಚ್. ಪಾಟೀಲ ವೃತ್ತ, ಮಾಳಶೆಟ್ಟಿ ವೃತ್ತ, ರೋಟರಿ ವೃತ್ತ, ಮಹಾತ್ಮ ಗಾಂಧಿ ವೃತ್ತದ ಮೂಲಕ ತೋಂಟದಾರ್ಯ ಮಠಕ್ಕೆ ತಲುಪುವುದು. ನಂತರ ಗದಗ ಜಿಲ್ಲಾಡಳಿತ ವತಿಯಿಂದ ಶ್ರೀಮಠ ಶಿವಾನುಭವ ಮಂಟಪದಲ್ಲಿ ಮುಂಜಾನೆ 11 ಗಂಟೆಗೆ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ.




ಈ ಮೆರವಣಿಗೆಯಲ್ಲಿ ಬಸವಪರ ಸಂಘಟನೆಗಳ ಸದಸ್ಯರು ಹಾಗೂ ಶ್ರೀಮಠದ ಸದ್ಭಕ್ತರು ಪಾಲ್ಗೊಳ್ಳಬೇಕೆಂದು ಸಂಘಟಿಕರ ಪರವಾಗಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ, ಜಗದ್ಗುರು ತೆ-ೂಂಟದಾರ್ಯ ಮಠದ ಜಾತ್ರಾ ಸಮಿತಿ-2025ರ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ, ಬಸವಕೇಂದ್ರದ ಅಧ್ಯಕ್ಷರಾದ ಕೆ.ಎಸ್. ಚಟ್ಟಿ, ಬಸವದಳದ ಅಧ್ಯಕ್ಷರಾದ ವ್ಹಿ.ಕೆ. ಕರೇಗೌಡ್ರ ಹಾಗೂ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ಮೇ.4ರಂದು ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ದೆಹಲಿಯ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯಿಂದ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನ್ಯಾಷನಲ್ ಎಲ್ಜಿಬಿಲಿಟಿ ಕಮ್ ಎಂಟ್ರನ್ಸ್ ಟೆಸ್ಟ್ (ಯು ಜಿ) 2025 ಪರೀಕ್ಷೆಗಳು ಮೇ 04 ರಂದು ಮಧ್ಯಾಹ್ನ 2 ಗಂಟೆಯಿಂದ ಸಾಯಾಂಕಾಲ 5 ಗಂಟೆಯವರೆಗೆ ನಡೆಯಲಿದೆ.



ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಗದಗ ಜಿಲ್ಲೆಯಲ್ಲಿ ಒಟ್ಟು 05 ಪರೀಕ್ಷಾ ಕೇಂದ್ರಗಳ ಸುತ್ತಲೂ ಮೇ 4 ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯರಾತ್ರಿ 12 ರವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ,

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿ ಬರುವ ಝುರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಸೇರಿದಂತೆ ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಹಾಗೂ ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ , ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಸಿ.ಎನ್, ಶ್ರೀಧರ ಅವರು ಆದೇಶಿಸಿದ್ದಾರೆ.

### ಶ್ರೀಮದ್ ರಂಭಾಪುರಿ ಪಂಚಾಕ್ಷರ ಜಗದ್ಗುರುಗಳ ಗದ್ದುಗೆ ಮಠದ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮಹಾತ್ಮರ ಚಿಂತನೆಗಳು ಶ್ರೇಯಸ್ಸಿಗೆ ಮೂಲ

■ವಿಜಯಸಾಕ್ಷಿ ಸುದ್ದಿ, ಚನ್ನಗಿರಿ

ಜೀವನಾಧಾರಕ್ಕೆ ನೀರು, ಅನ್ನ, ಗಾಳಿ ಮತ್ತು ಒಳ್ಳೆಯ ಮಾತು ಮುಖ್ಯ. ಸಕಲ ಧರ್ಮಕ್ಕೂ ದಯೆ ಮತ್ತು ಮಾನವೀಯತೆ ಮುಕುಟಪ್ರಾಯವಾಗಿವೆ. ಮಹಾತ್ಮರ ಆಧ್ಯಾತ್ಮ ಚಿಂತನೆಗಳ ಅರಿವು ಜೀವನ ಶ್ರೇಯಸ್ಸಿಗೆ ಮೂಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಮಂಗಳವಾರ ತಾಲೂಕಿನ ನಲ್ಲೂರು ಗ್ರಾಮದಲ್ಲಿ ಶ್ರೀಮದ್ ರಂಭಾಪುರಿ ಪಂಚಾಕ್ಷರ ಜಗದ್ಗುರುಗಳ ಗದ್ದುಗೆ ಮಠದ ಉದ್ಘಾಟನೆ, ಶ್ರೀ ಜಗದ್ಗುರು ರೇಣುಕಾಚಾರ್ಯ ಮಂಗಲ ಮೂರ್ತಿ ಪ್ರತಿಷ್ಠಾಪನೆ ಮತ್ತು ಗೋಪುರ ಕಳಸಾರೋಹಣ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಲ್ಲಿ ಆತ್ಮ ಬಲ ಬೆಳೆಯಲು ಆಧ್ಯಾತ್ಮದ ಹಸಿವು ಬೇಕು. ಸನ್ಮಾರ್ಗದಲ್ಲಿ ನಡೆಯುವ ಛಲ ಬೇಕು. ಸುಖ, ಶಾಂತಿಯ ಬದುಕಿಗೆ ಧರ್ಮ ಮತ್ತು ಸಂಸ್ಕೃತಿಗಳ ಪರಿಪಾಲನೆಯ ಅಗತ್ಯವಿದೆ. ಅನಾರೋಗ್ಯಕರ ಸಮಾಜಕ್ಕೆ ಅಡಿಗಲ್ಲು ಇಡುವ ಜನರ ಸಂಖ್ಯೆ ಹೆಚ್ಚಾಗುತ್ತಿದೆ. ಮನುಷ್ಯ ಜಾಗೃತಗೊಂಡು ಆದರ್ಶ, ಸಂಸ್ಕೃತಿಗಳ ಉಳಿವಿಗಾಗಿ ಶ್ರಮಿಸಬೇಕಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಶ್ವ ಬಂಧುತ್ವದ ವಿಚಾರ ಧಾರೆಗಳನ್ನು ಬೋಧಿಸುವ ಮೂಲಕ ಲಿಂ. ಶ್ರೀಮದ್ ರಂಭಾಪುರಿ ಪಂಚಾಕ್ಷರ ಜಗದ್ಗುರುಗಳವರು ವೀರಶೈವ ಧರ್ಮ ಸಂಸ್ಕೃತಿಯ ಅರಿವು ಉಂಟು ಮಾಡಿ ಭಕ್ತರ ಬಾಳಿಗೆ ಬೆಳಕು ತೋರಿದವರು ಎಂದರು.

ಸಮಾರಂಭ ಉದ್ಘಾಟಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನದ ಪ್ರಗತಿ ಮತ್ತು ಉನ್ನತಿಗೆ ಧರ್ಮ ದಿಕ್ಸೂಚಿಯಾಗಿದೆ.

ಸತ್ಯ, ಸಂಸ್ಕೃತಿ, ಆದರ್ಶ ಮೌಲ್ಯಗಳನ್ನು ಈ ನಾಡಿನ ಮಠಗಳು ಉಳಿಸಿ ಬೆಳೆಸಿಕೊಂಡು ಬಂದಿವೆ. ಲಿಂ. ಶ್ರೀ ರಂಭಾಪುರಿ ಪಂಚಾಕ್ಷರ ಜಗದ್ಗುರುಗಳವರ ಗದ್ದುಗೆ ಸುಂದರವಾಗಿ ನಿರ್ಮಿಸಿ ಗುರು ಕೃಪೆಗೆ ಪಾತ್ರರಾಗಿರುವುದು ತಮ್ಮೆಲ್ಲರ ಸೌಭಾಗ್ಯವೆಂದರು.

ಹುಣಸಘಟ್ಟ ಹಾಲಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿ, ಮನುಷ್ಯ ಜೀವನದಲ್ಲಿ ಹಣ-ಆಸ್ತಿ ಸಂಪಾದಿಸಿರಿ. ಆದರೆ ಅತಿಯಾದ ದುರಾಶೆ ಬೇಡ. ದುಡಿಮೆ ಮತ್ತು ಧರ್ಮವನ್ನು ನಂಬಿ ಬಾಳಲ್ಲಿ ಯಶಸ್ವಿ ಜೀವನ ಸೂತ್ರಗಳನ್ನು ಬೋಧಿಸಿ ಹರಸಿದ ಲಿಂ. ಶ್ರೀ ರಂಭಾಪುರಿ ಪಂಚಾಕ್ಷರ ಜಗದ್ಗುರುಗಳವರ ಗದ್ದುಗೆ ಕಟ್ಟಡ ನಿರ್ಮಾಣ ಮಾಡಿ ಗುರು ಕಾರುಣ್ಯಕ್ಕೆ ತಾವೆಲ್ಲರೂ ಪಾತ್ರರಾಗಿದ್ದೀರಿ ಎಂದು ಹರುಷ ವ್ಯಕ್ತಪಡಿಸಿದರು.

**ನೇತೃತ್ವ ವಹಿಸಿದ ಮುಕ್ತಿಮಂದಿರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ನದಿ ಮನುಷ್ಯನ ದಾಹ ಹಿಂಗಿಸುತ್ತದೆ. ವೃಕ್ಷ ನೆರಳು, ಹೂ-ಹಣ್ಣು ಕೊಡುತ್ತದೆ. ಆಚಾರ್ಯರು ಮತ್ತು ಋಷಿಮುನಿಗಳು ಜ್ಞಾನ ಸುಧೆಯ ಮೂಲಕ ಇತರರ ಬಾಳನ್ನು ಬೆಳಗಿಸಿದ್ದಾರೆ. ಲಿಂ. ಶ್ರೀ ರಂಭಾಪುರಿ ಪಂಚಾಕ್ಷರ ಜಗದ್ಗುರುಗಳು ವೀರಶೈವ ಚಿಂತನೆಯನ್ನು ಬೋಧಿಸಿ ಸಕಲರನ್ನು ಉದ್ಧರಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.**

ಬಿಳಕಿ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ನಂದಿಪುರ ನಂದೀಶ್ವರ ಶಿವಾಚಾರ್ಯ ಸ್ವಾಮಿಗಳು, ಮಳಲಿ ಸಂಸ್ಥಾನ ಮಠದ ಡಾ.ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು, ಬೀರೂರು ಬಾಳೆಹೊನ್ನೂರು ಖಾಸಾ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು, ಚನ್ನಗಿರಿ ವಿರಕ್ತಮಠದ ಡಾ. ಬಸವ ಜಯಚಂದ್ರ ಸ್ವಾಮಿಗಳು, ಹಣ್ಣೆ ಬೃಹನ್ಮಠದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು, ಚನ್ನಗಿರಿ ಹಿರೇಮಠದ ಡಾ. ಕೇದಾರ ಶಿವಶಾಂತವೀರ ಶಿವಾಚಾರ್ಯ ಸ್ವಾಮಿಗಳು, ಕಲಾದಗಿ ಗಂಗಾಧರ ಶಿವಾಚಾರ್ಯ ಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಗಂಗಾಧರಸ್ವಾಮಿ ಹಿರೇಮಠ ವಿಠಲಾಪುರ ಇವರಿಂದ ಪ್ರಾರ್ಥನಾ ಗೀತೆ ಜರುಗಿತು. ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

# ಸಹಾಯವಾಣಿ ಸಂಪರ್ಕ ಕೇಂದ್ರ ಸ್ಥಾಪನೆ

■ವಿಜಯಸಾಕ್ಷಿ ಸುದ್ದಿ, ಗದಗ

ದಿ.5-5-2025ರಿಂದ 17-05-2025 ರ ರವರೆಗೆ ನ್ಯಾಯಮೂರ್ತಿಗಳಾದ ಹೆಚ್.ಎನ್ ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮೀಕ್ಷಾ ಕಾರ್ಯಾಚರಣೆಗಾಗಿ ಗಣತಿದಾರರು ಆ್ಯಪ್ ಮೂಲಕ ಮನೆ ಮನೆಗೆ ತೆರಳಿ ಸಮೀಕ್ಷೆ ಕೈಗೊಳ್ಳುವ ಸಂದರ್ಭದಲ್ಲಿ ಹಾಗೂ ದಿ. 19-05-2025 ರಿಂದ 21-05-2025 ಮತಗಟ್ಟೆ ಪ್ರದೇಶವಾರು ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ ಕೈಗೊಳ್ಳುವ ಸಂದರ್ಭಗಳಲ್ಲಿ ಮಾಹಿತಿ ಕೊಡುವ ಸಾರ್ವಜನಿಕರಿಗೆ ಉಂಟಾಗುವ ಸಮಸ್ಯೆ ಮತ್ತು ಗೊಂದಲಗಳ ಕುರಿತು ಉಪನಿರ್ದೇಶಕರ ಕಚೇರಿ ಸಮಾಜ ಕಲ್ಯಾಣ ಇಲಾಖೆ ಗದಗ ರೂಮ್ ನಂ. 107 ರಲ್ಲಿ ಸಹಾಯವಾಣಿ ಮತ್ತು ಸಹಾಯ ಕೇಂದ್ರವನ್ನು ತೆರೆಯಲಾಗಿದೆ. ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮೀಕ್ಷೆ ಸಂದರ್ಭದಲ್ಲಿ ಆ್ಯಪ್ ಮೂಲಕ ನೋಂದಣಿ ಮಾಡುವ ಸಮಯದಲ್ಲಿ ಉಂಟಾಗುವ ಸಮಸ್ಯೆ ಮತ್ತು ಗೊಂದಲಗಳ ಕುರಿತು ಸಾರ್ವಜನಿಕರಿಗೆ ಸಹಾಯವಾಣಿ ಮತ್ತು ಸಹಾಯ ಕೇಂದ್ರವನ್ನು ಸಂಪರ್ಕಿಸಬಹುದಾಗಿದೆ. (ಸಹಾಯವಾಣಿ ನಂಬರ್-08372231828)

# ನಿಧನ

**ರೇಣಮ್ಮ ಬಡಿಗೇರ**



ಗದಗ: ತಾಲೂಕಿನ ಕುರ್ತಕೋಟಿ ಗ್ರಾಮದ ವಿಶ್ವಕರ್ಮ ಕರಕುಶಲಕರ್ಮಿಗಳ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಲಕ್ಷ್ಮಣ್ ಬಡಿಗೇರ ಅವರ ತಾಯಿ ರೇಣಮ್ಮ ಭೀಮಪ್ಪ ಬಡಿಗೇರ 29-04-2025ರ ಮಂಗಳವಾರ ಮಧ್ಯಾಹ್ನ ನಿಧನರಾದರು.

ಮೃತರ ಅಂತ್ಯಕ್ರಿಯೆ ಅಂದೇ ಸಂಜೆ ಗ್ರಾಮದ ರುದ್ರಭೂಮಿಯಲ್ಲಿ ಜರುಗಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka